24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 25 | ನವದೆಹಲಿ | ಬೆಲೆ ₹10 | ಜುಲೈ 21 2026, ಮಂಗಳವಾರ



24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಜುಲೈ 21 2026, ಮಂಗಳವಾರ

## ಒಳಪುಟಗಳಲ್ಲಿ



ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಣೆ - ಆತಂಕಕಾರಿ: ಅಶೋಕ್ ವಾಗ್ದಾಳಿ - ಪು.4

ಮೋಡಗಳು ಕಾಣದಿದ್ದರೆ ಕೇವಲ ಮಳೆಯಷ್ಟೇ ಮರೆಯಾಗುವುದಿಲ್ಲ: ದಿವಾಕರ್ ಶೆಟ್ಟಿ ಅಡ್ಯಾರ್‌ಅ - ಪು.5


# ಪ್ರತಿಪಕ್ಷ ಪ್ರತಿಭಟನೆ ನಡುವೆಯೇ ಸಂಸತ್ ಮುಂಗಾರು ಅಧಿವೇಶನ ಆರಂಭ

## ನೀಟ್, ರಾಮಮಂದಿರ ದೇಣಿಗೆ ವಿವಾದದ ಕುರಿತು ಪದೇಪದೇ ಮುಂದೂಡಿಕೆ ಲೋಕಸಭೆ ಸ್ಪೀಕರ್, ರಾಜ್ಯಸಭೆ ಸಭಾಪತಿ ಮನವಿಗೂ ಮಣಿಯದ ವಿಪಕ್ಷ

**ನವದೆಹಲಿ, ಜುಲೈ 20: ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಸೋಮವಾರ ಮಳೆಗಾಲದ ಅಧಿವೇಶನವು ಪ್ರಕ್ಷುಬ್ಧವಾಗಿ ಆರಂಭವಾಯಿತು. ನೀಟ್-ಯುಜಿ 2026 ಪ್ರಶ್ನೆ ಪತ್ರಿಕೆ ಸೋರಿಕೆ, ರಾಮಮಂದಿರ ದೇಣಿಗೆಯಲ್ಲಿ ಅಕ್ರಮಗಳು ಮತ್ತು ಇತರ ವಿಷಯಗಳ ಕುರಿತು ವಿರೋಧ ಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗಿದ್ದರಿಂದ, ಕಲಾಪಗಳಿಗೆ ತಡೆಯಾಯಿತು.**

ಪ್ರತಿಪಕ್ಷಗಳ ಗದ್ದಲದಿಂದಾಗಿ ಲೋಕಸಭೆ ಮತ್ತು ರಾಜ್ಯಸಭೆಯನ್ನು ಮಧ್ಯಾಹ್ನ 12 ಗಂಟೆಯವರೆಗೆ ಮುಂದೂಡಲಾಯಿತು. ಸದನಗಳು ಮತ್ತೆ ಸೇರಿದಾಗ, ಅವು ಮತ್ತೆ ಗದ್ದಲದ ಪ್ರತಿಭಟನೆಗಳಲ್ಲಿ ಮುಳುಗಿದವು, ವಿರೋಧ ಪಕ್ಷದ ಸದಸ್ಯರ ನಿರಂತರ ಘೋಷಣೆಗಳ ನಡುವೆ ಹೊಸ ಮುಂದೂಡಿಕೆಗಳು ಸಂಭವಿಸಿದವು.

ಲೋಕಸಭೆಯಲ್ಲಿ, ಆರಂಭಿಕ ಮುಂದೂಡಿಕೆಯ ನಂತರ ಪ್ರಶ್ನೋತ್ತರ ಅವಧಿಯೊಂದಿಗೆ ಕಲಾಪಗಳು ಪುನರಾರಂಭಗೊಂಡವು. ಆದಾಗ್ಯೂ, ವಿರೋಧ ಪಕ್ಷದ ಸಂಸದರು ತಕ್ಷಣವೇ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಅಯೋಧ್ಯೆಯ ರಾಮ ಜನ್ಮಭೂಮಿ ದೇವಸ್ಥಾನದಲ್ಲಿ ದೇಣಿಗೆ ನಿರ್ವಹಣೆಗೆ ಸಂಬಂಧಿಸಿದ ಆರೋಪಗಳ ಕುರಿತು ಘೋಷಣೆಗಳನ್ನು ಕೂಗಿದರು, ಇದರಿಂದಾಗಿ ಕಲಾಪಗಳು ಅಡ್ಡಿಪಡಿಸಲ್ಪಟ್ಟವು. ಸಂಸತ್ತಿನ ಅಧಿವೇಶನದ ಆರಂಭದ ದಿನವು ಅಡ್ಡಿಗಳೊಂದಿಗೆ ಪ್ರಾರಂಭವಾಗಬಾರದು ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸದಸ್ಯರಿಗೆ ಮನವಿ ಮಾಡಿದರು. ಸಭಾಪತಿಯವರು ಪದೇಪದೇ ಮನವಿ ಮಾಡಿದರೂ, ಘೋಷಣೆ ಕೂಗುವುದು ಮುಂದುವರೆದಿದ್ದು, ಸ್ಪೀಕರ್ ಅವರು ಮಧ್ಯಾಹ್ನ 12.30 ರವರೆಗೆ ಸದನವನ್ನು ಮತ್ತೆ ಮುಂದೂಡುವಂತೆ ಒತ್ತಾಯಿಸಲಾಯಿತು.



ಸಂಸತ್ ಅಧಿವೇಶನ

ರಾಜ್ಯಸಭೆಯೂ ಇದೇ ರೀತಿಯ ದೃಶ್ಯಗಳಿಗೆ ಸಾಕ್ಷಿಯಾಯಿತು. ಅಧಿಕೃತ ಪತ್ರಿಕೆಗಳನ್ನು ಸದನದ ಮೇಜಿನ ಮೇಲೆ ಇರಿಸಿದ ಕೂಡಲೇ, ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ನೀಟ್-ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆಯ ವಿಷಯವನ್ನು ಪ್ರಸ್ತಾಪಿಸಲು ಪ್ರಯತ್ನಿಸಿದರು, ಇದು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಪರಿಣಾಮ ಬೀರುವ ವಿಷಯ ಎಂದು ವಿವರಿಸಿದರು. ಸಭಾಪತಿ ಸಿ.ಪಿ,ರಾಧಾಕೃಷ್ಣನ್ ಅವರು ಸದಸ್ಯರು ಸುವ್ಯವಸ್ಥೆಯನ್ನು ಕಾಯ್ದುಕೊಳ್ಳುವಂತೆ ಮತ್ತು ಸದನವನ್ನು ಕಾರ್ಯರೂಪಕ್ಕೆ ತರಲು ಒತ್ತಾಯಿಸಿದರು. ಆದಾಗ್ಯೂ, ಗದ್ದಲ ಮುಂದುವರಿದಂತೆ, ಅವರು ರಾಜ್ಯಸಭೆಯನ್ನು ಮಧ್ಯಾಹ್ನದವರೆಗೆ ಮುಂದೂಡಿದರು. ಸದನ ಮತ್ತೆ ಸೇರಿದ ನಂತರ, ಅಡ್ಡಿ ಆತಂಕಗಳು ಮುಂದುವರಿದವು, ಇದು ಮಧ್ಯಾಹ್ನ 12.30 ರವರೆಗೆ ಮತ್ತೊಂದು ಮುಂದೂಡಿಕೆಗೆ ಕಾರಣವಾಯಿತು.


ಆಗಸ್ಟ್ 13ರವರೆಗೆ ನಡೆಯಲಿರುವ ಮಳೆಗಾಲದ ಅಧಿವೇಶನವು ಸರ್ಕಾರ ಮತ್ತು ವಿರೋಧ ಪಕ್ಷದ ನಡುವೆ ತೀವ್ರ ಘರ್ಷಣೆಗೆ ಸಾಕ್ಷಿಯಾಗುವ ನಿರೀಕ್ಷೆಯಿದೆ. 2026 ರ ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ, ಬೆಲೆ ಏರಿಕೆ, ನಿರುದ್ಯೋಗ, ಇತ್ತೀಚಿನ ಪ್ರವಾಹದ ನಂತರದ ಜಮ್ಮು ಮತ್ತು ಕಾಶ್ಮೀರದ ಪರಿಸ್ಥಿತಿ ಮತ್ತು ಸಾರ್ವಜನಿಕ ಪ್ರಾಮುಖ್ಯತೆಯ ಇತರ ವಿಷಯಗಳು ಸೇರಿದಂತೆ ಹಲವಾರು ವಿಷಯಗಳ ಕುರಿತು ಚರ್ಚೆ ನಡೆಸುವುದಾಗಿ ವಿರೋಧ ಪಕ್ಷ ಸೂಚಿಸಿದೆ.

# ಬಲಪ್ರಯೋಗದ ಮೂಲಕ ಜನರ ಧ್ವನಿ ಅಡಗಿಸಲು ಯತ್ನ





**ನವದೆಹಲಿ, ಜು.20:** ಸಂಸತ್ತಿನ ಮುಂಗಾರು ಅಧಿವೇಶನದ ಮೊದಲ ದಿನವೇ ನೀಟ್ ಪರೀಕ್ಷೆ ಅಕ್ರಮ ಹಾಗೂ ಜಂತರ್ ಮಂತರ್‌ನಲ್ಲಿ ಪ್ರತಿಭಟನಾಕಾರರ ಮೇಲೆ ನಡೆದ ಪೊಲೀಸ್ ಬಲಪ್ರಯೋಗದ ವಿಷಯ ರಾಜ್ಯಸಭೆಯಲ್ಲಿ ಪ್ರತಿಧ್ವನಿಸಿತು.



**ನೀಟ್ ಪರೀಕ್ಷೆ ಅಕ್ರಮ ವಿರೋಧಿ ಹೋರಾಟಗಾರರ ಮೇಲೆ ಲಾಠಿಪ್ರಹಾರ, ಅಶ್ರುವಾಯು ಪ್ರಯೋಗಕ್ಕೆ ಮಲ್ಲಿಕಾರ್ಜುನ ಖರ್ಗೆ ಆಕ್ರೋಶ**

ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಈ ವಿಷಯವನ್ನು ಪ್ರಸ್ತಾಪಿಸಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದು, ಪ್ರತಿಪಕ್ಷಗಳ ಗದ್ದಲದ ಹಿನ್ನೆಲೆಯಲ್ಲಿ ಸದನದ ಕಲಾಪವನ್ನು ಮಧ್ಯಾಹ್ನ 12:30ಕ್ಕೆ ಮುಂದೂಡಲಾಯಿತು. ಜಂತರ್ ಮಂತರ್‌ನಲ್ಲಿ ಶಾಂತಿಯುತವಾಗಿ ಚಲೋ ಸಂಸತ್ ಮೆರವಣಿಗೆಗೆ ಯತ್ನಿಸುತ್ತಿದ್ದ ನೀಟ್ ಅಭ್ಯರ್ಥಿಗಳು, ವಿದ್ಯಾರ್ಥಿಗಳು ಮತ್ತು ಯುವಜನರ ಮೇಲೆ ದೆಹಲಿ ಪೊಲೀಸರು ಬಲಪ್ರಯೋಗ ಹಾಗೂ ಲಾಠಿಚಾರ್ಜ್ ನಡೆಸಿರುವುದನ್ನು ಖರ್ಗೆ ಕಠಿಣವಾಗಿ ಖಂಡಿಸಿದರು. ನ್ಯಾಯಸಮ್ಮತ ಬೇಡಿಕೆಗಳಿಗಾಗಿ ಹೋರಾಡುತ್ತಿರುವ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಧ್ವನಿಯನ್ನು ಅಡಗಿಸಲು ಕೇಂದ್ರ ಸರ್ಕಾರವು ಪೊಲೀಸ್ ಶಕ್ತಿಯನ್ನು ಬಳಸುತ್ತಿದೆ. ಇದು ಪ್ರಜಾಪ್ರಭುತ್ವ ವಿರೋಧಿ ವರ್ತನೆ ಎಂದು ಖರ್ಗೆ ರಾಜ್ಯಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು. ಖರ್ಗೆ ಅವರ ಹೇಳಿಕೆಗೆ ಆಡಳಿತ ಪಕ್ಷದ ಸದಸ್ಯರು ತೀವ್ರ ವಿರೋಧ ವ್ಯಕ್ತಪಡಿಸಿದರು. ಅದೇ ವೇಳೆ, ನೀಟ್ ಪರೀಕ್ಷಾ ಸುಧಾರಣೆ ಹಾಗೂ ಸೋನಮ್ ವಾಂಗ್ಚುಕ್ ಅವರ ಆರೋಗ್ಯ ಸ್ಥಿತಿಯ ಕುರಿತು ತಕ್ಷಣವೇ ಚರ್ಚೆಗೆ ಅವಕಾಶ ನೀಡಬೇಕು ಎಂದು ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷದ ನಾಯಕರು ಪಟ್ಟು ಹಿಡಿದು ಸಭಾಪತಿಯವರ ಪೀಠದ ಮುಂಭಾಗಕ್ಕೆ ಧಾವಿಸಿದರು.

# ಮನೆಮನೆಗೆ ಉಚಿತ ಜಾತಿ ಹಾಗೂ ಶಾಶ್ವತ ನಿವಾಸ ಪ್ರಮಾಣಪತ್ರ ವಿತರಣೆ



## ■ ರಾಜ್ಯ ಸರ್ಕಾರದ ಐತಿಹಾಸಿಕ ತೀರ್ಮಾನ: ವಿಭಿನ್ನ ದೇಶದಲ್ಲೇ ವಿಭಿನ್ನ ಎನ್ನಲಾದ ಸೇವೆಗೆ ಸಿಎಂ ಡಿ.ಕೆ. ಶಿವಕುಮಾರ್ ಚಾಲನೆ

**ಬೆಂಗಳೂರು, ಜು.20:** ಮನೆ ಮನೆಗೆ ತೆರಳಿ ಶಾಶ್ವತ ನಿವಾಸ ಪ್ರಮಾಣ ಪತ್ರವನ್ನು ಉಚಿತವಾಗಿ ನೀಡುವ ಐತಿಹಾಸಕ ತೀರ್ಮಾನ ಕೈಗೊಂಡಿದ್ದು, ಇದು ಇಡೀ ದೇಶದಲ್ಲಿಯೇ ಅತ್ಯಂತ ವಿಭಿನ್ನವಾದದ್ದು. ಮತದಾರರ ಪಟ್ಟಿಗೆ ಸೇರಲು ಚುನಾವಣಾ ಆಯೋಗ ಸೂಚಿಸಿರುವ 11 ದಾಖಲೆಗಳಲ್ಲಿ ಇದು ಪ್ರಮುಖವಾದದ್ದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ "ರಾಜ್ಯದಲ್ಲಿ ಮನೆ ಮನೆಗೆ ತೆರಳಿ ಉಚಿತ ಜಾತಿ ಪ್ರಮಾಣಪತ್ರ ವಿತರಣೆ ಹಾಗೂ ಶಾಶ್ವತ ನಿವಾಸ ಪ್ರಮಾಣ ಪತ್ರ ಸೇವೆಗೆ" ಚಾಲನೆ ನೀಡಿದರು. ಇದೇ ವೇಳೆ ಶಾಶ್ವತ ನಿವಾಸ ಪ್ರಮಾಣಪತ್ರ ಸೇವೆಯ ವೆಬ್‌ಸೈಟ್ ಹಾಗೂ ವಾಟ್ಸ್‌ಆಪ್ ಸೇವೆಗೆ ಕೂಡ ಚಾಲನೆ ನೀಡಿದರು. ನಂತರ ಮಾತನಾಡಿದ ಮುಖ್ಯಮಂತ್ರಿ, ಎಸ್ ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಮನೆ ಬಾಗಿಲಿಗೆ ಪಹಣಿ ನೀಡುವ ಮೂಲಕ ಹೊಸ ಹೆಜ್ಜೆ ಇಟ್ಟಿತ್ತು. ನಾನು ಮುಖ್ಯಮಂತ್ರಿಯಾಗುವ ಮುನ್ನ ಹಾಗೂ ನಂತರವೂ "ನಿಮ್ಮ ಮತ ನಿಮ್ಮ ಹಕ್ಕು, "ನಿಮ್ಮ ಮತ- ನಿಮ್ಮ ಬದುಕು" ಇದಕ್ಕೆ ನಮ್ಮ ಸರ್ಕಾರ ಗ್ಯಾರಂಟಿ ಎನ್ನುವುದು ನಮ್ಮ ಮಂತ್ರ ಹಾಗೂ ತತ್ವವಾಗಿದೆ ಎಂದರು. ದೇಶದಲ್ಲಿಯೇ 4.85 ಕೋಟಿ ಕುಟುಂಬಗಳಿಗೆ ಈ ದಾಖಲೆ ಮನೆಗೆ ತಲುಪಿಸುವ ಕಾರ್ಯ ಕೈಗೊಂಡ ಪ್ರಥಮ ರಾಜ್ಯ ಕರ್ನಾಟಕ ಎನ್ನುವುದು ನಮ್ಮ ಹೆಮ್ಮೆ ಎಂದರು.

ಚುನಾವಣಾ ಆಯೋಗ ಸೂಚಿಸಿರುವ ಕ್ರಮಗಳನ್ನು ಚಾಚೂ ತಪ್ಪದೆ ಸರ್ಕಾರ ಪಾಲಿಸುತ್ತಿದೆ.

**ಕರ್ನಾಟಕ ಸರ್ಕಾರ ಕೈಗೊಂಡಿರುವ ಐತಿಹಾಸಿಕ ಹೆಜ್ಜೆ**

**ಜನರ ಬದುಕಿಗೆ ನೇರವಾಗಿ ಸಹಾಯ ಮಾಡುವುದು ಹಾಗೂ ರಕ್ಷಣೆ ಒದಗಿಸುವ ನಿಟ್ಟಿನಲ್ಲಿ ಆಡಳಿತ ವ್ಯವಸ್ಥೆಯಲ್ಲಿಯೇ ಕರ್ನಾಟಕ ಸರ್ಕಾರ ಕೈಗೊಂಡಿರುವ ಐತಿಹಾಸಿಕ ಹೆಜ್ಜೆ ಇದಾಗಿದೆ ಎಂದು ಸಿಎಂ ಬಣ್ಣಿಸಿದರು. ಅಭಿಯಾನದ ಮೂಲಕ ಜನರ ಸೌಲಭ್ಯಗಳನ್ನು ನೇರವಾಗಿ ಮನೆಬಾಗಿಲಿಗೆ ತಲುಪಿಸಲಾಗುತ್ತಿದೆ. ಸರ್ಕಾರ ಮತ್ತು ಜನರ ನಡುವಿನ ಅಂತರ ನಿವಾರಣೆಯಾಗಬೇಕು ಎನ್ನುವ ದೃಷ್ಟಿಯಿಂದ ಹಾಗು ಜನರು ಸರ್ಕಾರಿ ಕಚೇರಿಗಳಿಗೆ ಅಲೆಯಬಾರದು ಎಂಬ ದೃಷ್ಟಿಯಿಂದ ಈ ಕಾರ್ಯವನ್ನು ಕೈಗೊಂಡಿದೆ ಎಂದರು.**

ರಾಜ್ಯದ ನಿವಾಸಿಗಳಿಗೆ ಅಗತ್ಯವಿರುವ ಪ್ರಮಾಣಪತ್ರಗಳನ್ನು ನೀಡುವುದು ರಾಜ್ಯ ಸರ್ಕಾರದ ಹೊಣೆಗಾರಿಕೆ. ಇದನ್ನು ಪಕ್ಷಾತೀತವಾಗಿ ನಾವು ಜವಾಬ್ದಾರಿಯಿಂದ ಕೈಗೊಂಡಿದ್ದೇವೆ. ಸರ್ಕಾರ ಅಧಿಕಾರ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ ಎಂದು ದೂರುವವರಿದ್ದು, ಆದರೆ ಜನರಿಗೆ ನೆರವಾಗುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ಸ್ಪಷ್ಟಪಡಿಸಿದರು. ಮತದಾರರ ಪಟ್ಟಿಯಲ್ಲಿ ಹೆಸರು ಕಳೆದುಕೊಂಡರೆ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಾರೆ. ಅರ್ಜಿಗಳನ್ನು ಆನ್‌ಲೈನ್ ಮೂಲಕ, ಸೇವಾ ಕೇಂದ್ರಗಳಲ್ಲಿ, ಹೋಬಳಿ ಮಟ್ಟದಲ್ಲಿ ತೆರೆಯಲಾಗಿರುವ facilitation centreಗಳಲ್ಲಿ ಪಡೆಯುವ ಅವಕಾಶ ಕಲ್ಪಿಸಲಾಗಿದೆ. ನನ್ನ ಮತ್ತು ಉಪಮುಖ್ಯಮಂತ್ರಿಗಳ ಭಾವಚಿತ್ರವಿರುವ ಪ್ರಮಾಣ ಪತ್ರವನ್ನು ಪಡೆಯಬಹುದು. ಬಿಎಲ್‌ಓಗಳು ನೀಡುವ ಅರ್ಜಿಗಳನ್ನು ಭರ್ತಿ ಮಾಡಿ ಅವರಿಗೆ ತಲುಪಿಸಬೇಕು. ಐದು ಗ್ಯಾರಂಟಿಗಳ ಜೊತೆ ಭೂಮಿ ಗ್ಯಾರಂಟಿಯನ್ನೂ ನೀಡುತ್ತಿದ್ದು, ಇದರ ಜೊತೆಗೆ ರಾಜ್ಯದಲ್ಲಿ ವಿಶೇಷ ಆಂದೋಲನವನ್ನು ಸರ್ಕಾರ ಕೈಗೊಂಡು ಮತದಾನದ ಗ್ಯಾರಂಟಿಯನ್ನು ಜಾರಿಗೊಳಿಸಿದ್ದೇವೆ ಎಂದರು.

**ರಾಜಕಾರಣ ಮುಖ್ಯವಲ್ಲ, ಜನರ ಬದುಕು ಹಾಗೂ ಹಕ್ಕು ಮುಖ್ಯ**

**ಈ ಸೌಲಭ್ಯವನ್ನು ಜನರಿಗೆ ತಲುಪಿಸಲು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿರುವ ಗ್ರಾಮಲೆಕ್ಕಿಗರು ಸೇರಿದಂತೆ ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರ ಶ್ರಮ ಅಭಿನಂದನೀಯ ಎಂದು ಮುಖ್ಯಮಂತ್ರಿಗಳು ಜನರು ಶಾಶ್ವತ ಸಾಕ್ಷಿ0ಪತ್ರವನ್ನು ಉಳಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಶಾಸಕಾಂಗದಲ್ಲಿ ನಿಯಮಗಳನ್ನು ರೂಪಿಸಿದರೂ, ಅದನ್ನು ಕಾರ್ಯಾಂಗ ನಿಷ್ಠೆಯಿಂದ ಅನುಷ್ಠಾನಗೊಳಿಸಿದಾಗ ಮಾತ್ರ ಸರ್ಕಾರದ ಉದ್ದೇಶ ಸಾರ್ಥಕವಾಗುತ್ತದೆ ಎಂದರು. ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಜಿ.ಪರಮೇಶ್ವರ್, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಮನೀಶ್ ಮೌದ್ಗಿಲ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಎಲ್.ಕೆ. ಅತೀಕ್, ಕಂದಾಯ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.**

# ಧರಣಿ ಹಿಂಪಡೆಯಲು ಸೋನಮ್ ವಾಂಗ್ಚುಕ್ 3 ಷರತ್ತು

**ನವದೆಹಲಿ, ಜು.20:** ದೆಹಲಿಯ ನೀಟ್ ಪರೀಕ್ಷಾ ಅಕ್ರಮ ವಿರೋಧಿಸಿ 21 ದಿನಗಳಿಂದ ನಿರಶನ ನಡೆಸುತ್ತಿರುವ ಸೋನಮ್ ವಾಂಗ್ಚುಕ್ ಅವರು ಹೋರಾಟ ಅಂತ್ಯಗೊಳಿಸಲು ಕೇಂದ್ರ ಸರ್ಕಾರಕ್ಕೆ 3 ಷರತ್ತುಗಳನ್ನು ವಿಧಿಸಿದ್ದಾರೆ. ಆರೋಗ್ಯ ಸ್ಥಿತಿ ತೀವ್ರ ಕ್ಷೀಣಿಸಿದ ಹಿನ್ನೆಲೆಯಲ್ಲಿ ಶನಿವಾರ ದೆಹಲಿ ಪೊಲೀಸರು ವಾಂಗ್ಚುಕ್ ಅವರನ್ನು



ಜಂತರ್ ಮಂತರ್‌ನಿಂದ ಸಫ್ದರ್‌ಜಂಗ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದ್ದು, ಪ್ರಸ್ತುತ ಚಿಕಿತ್ಸೆ ಮತ್ತು ಗ್ಲೂಕೋಸ್ ಸ್ವೀಕರಿಸಲು ನಿರಾಕರಿಸುತ್ತಿರುವ ಅವರು, ಸರ್ಕಾರ ತಮ್ಮ ಮೂರು ಬೇಡಿಕೆಗಳನ್ನು ಈಡೇರಿಸಿದರೆ ಮಾತ್ರ ನಿರಶನ ಹಿಂಪಡೆಯುವುದಾಗಿ ತಿಳಿಸಿದ್ದಾರೆ.

**ಷರತ್ತುಗಳೇನು?: 1)** ಸಂಸತ್ತಿನ ಮುಂಗಾರು ಅಧಿವೇಶನ ಸೋಮವಾರ ಶುರುವಾಗಿದ್ದು, ದೇಶಾದ್ಯಂತ ಬಂದಿರುವ ವಿದ್ಯಾರ್ಥಿಗಳು ಮತ್ತು ಹೋರಾಟಗಾರರು ಸಂಸತ್ತಿನವರೆಗೆ ಶಾಂತಿಯುತ ಮೆರವಣಿಗೆ ನಡೆಸಲು ದೆಹಲಿ ಪೊಲೀಸರು ಅವಕಾಶ ನೀಡಬೇಕು. **2)** ನೀಟ್ ಪರೀಕ್ಷೆ ಅಕ್ರಮ, ಪೇಪರ್ ಲೀಕ್ ಹಾಗೂ ಶಿಕ್ಷಣ ವ್ಯವಸ್ಥೆಯ ಸುಧಾರಣೆ ಕುರಿತು ಕೇಂದ್ರ ಶಿಕ್ಷಣ ಸಚಿವರು ಪರಿಶೀಲನೆ ನಡೆಸಿ, ಅಗತ್ಯ ಕ್ರಮ ಕೈಗೊಳ್ಳುವುದಾಗಿ ಅಧಿಕೃತ ಲಿಖಿತ ಭರವಸೆ ನೀಡಬೇಕು. **3)** ಪ್ರತಿಭಟನೆ ಮತ್ತು ಹೋರಾಟದ ವೇಳೆ ದೆಹಲಿ ಹಾಗೂ ಇತರೆಡೆ ವಿದ್ಯಾರ್ಥಿ ಹೋರಾಟಗಾರರ ವಿರುದ್ಧ ದಾಖಲಿಸಿರುವ ಎಲ್ಲಾ ಎಫ್‌ಐಆರ್‌ಗಳನ್ನು ತಕ್ಷಣವೇ ಹಿಂಪಡೆಯಬೇಕು.

## ಸಿಜೆಪಿ ಬೇಡಿಕೆಗಳ ಬಗ್ಗೆ ಸರ್ಕಾರದ ಜೊತೆ ಚರ್ಚಿಸುವೆ ಹೋರಾಟಗಾರರಿಗೆ ಕೇಂದ್ರ ಸಚಿವ ಜೆ.ಪಿ.ನಡ್ಡಾ ಭರವಸೆ



**ಕಾಕ್ರೋಚ್ ಜನತಾ ಪಕ್ಷದ ಪ್ರತಿನಿಧಿಗಳು, ಕೇಂದ್ರ ಆರೋಗ್ಯ ಇಲಾಖೆ ಸಚಿವ ಜೆ.ಪಿ.ನಡ್ಡಾ ಅವರನ್ನು ಸೋಮವಾರ ದೆಹಲಿಯಲ್ಲಿ ಭೇಟಿ ಮಾಡಿ ತಮ್ಮ ಹೋರಾಟದ ಪ್ರಮುಖ ಮೂರು ಬೇಡಿಕೆಗಳನ್ನು ಈಡೇರಿಸಬೇಕು ಎಂದು ಕೋರಿ ಮನವಿ ಸಲ್ಲಿಸಿದ್ದಾರೆ. ಮನವಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಜೆ.ಪಿ. ನಡ್ಡಾ, ಈ ಬಗ್ಗೆ ಸರ್ಕಾರದ ಜೊತೆ ಚರ್ಚಿಸಿ ನಿರ್ಧರಿಸುವುದಾಗಿ ಭರವಸೆ ನೀಡಿದ್ದಾರೆ. ಸಿಜೆಪಿಯ ಪ್ರತಿನಿಧಿಗಳಾದ ಅಶುತೋಷ್ ರಂಕ, ಸೌರವ್‌ದಾಸ್ ಅವರು ಕೇಂದ್ರ ಸಚಿವರನ್ನು ಭೇಟಿಯಾದರು. ತಮ್ಮ ಬೇಡಿಕೆಗಳನ್ನು ಸಲ್ಲಿಸಿರುವ ಬಗ್ಗೆ ಅವರು ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಪ್ರಮುಖ ಮೂರು ಬೇಡಿಕೆಗಳಾದ ಶಿಕ್ಷಣ ತಜ್ಞ, ಸಾಮಾಜಿಕ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡುವುದು, ಕೇಂದ್ರ ಶಿಕ್ಷಣ ಸಚಿವ ಸ್ಥಾನಕ್ಕೆ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಪಡೆಯುವುದು ಮತ್ತು ಆತ್ಮಹತ್ಯೆ ಮಾಡಿಕೊಂಡ ಎಲ್ಲಾ ನೀಟ್-ಯುಜಿ 2026 ಆಕಾಂಕ್ಷಿಗಳ ಕುಟುಂಬಗಳಿಗೆ ತಲಾ 1 ಕೋಟಿ ರೂಪಾಯಿ ಪರಿಹಾರ ನೀಡಬೇಕು ಎಂಬ ಬೇಡಿಕೆಗಳನ್ನು ಕೇಂದ್ರ ಸಚಿವರ ಮುಂದಿಟ್ಟಿದ್ದೇವೆ ಎಂದು ಅಶುತೋಷ್ ರಂಕ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.**

# ಕಾವೇರಿ ನದಿ ನೀರು ಹಂಚಿಕೆ: ನಾಳೆ ಸಿಡಬ್ಲ್ಯುಎನ್‌ಎ ಸಭೆ

**ನವದೆಹಲಿ, ಜು.20:** ಕಾವೇರಿ ಜಲ ಹಂಚಿಕೆ ವಿಚಾರ ಮತ್ತೊಮ್ಮೆ ತೀವ್ರ ಚರ್ಚೆಗೆ ಗ್ರಾಸವಾಗಿದ್ದು, ರಾಜ್ಯದಲ್ಲಿ ಬರದ ಪರಿಸ್ಥಿತಿ ಇದ್ದರೂ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವಂತೆ ಆ ರಾಜ್ಯ ತನ್ನ ಒತ್ತಡವನ್ನು ಹೆಚ್ಚಿಸಿದೆ. ಈ ಹಿನ್ನೆಲೆಯಲ್ಲಿ ಕಾವೇರಿ ನೀರು ನಿರ್ವಹಣ ಪ್ರಾಧಿಕಾರದ ಉನ್ನತ ಮಟ್ಟದ ಸಭೆಯನ್ನು ಜುಲೈ 22ರಂದು ನವದೆಹಲಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ.

**ಕರ್ನಾಟಕ, ತಮಿಳುನಾಡು ಹಾಗೂ ಪಾಂಡಿಚೇರಿ ಭಾಗಿ**

ಕಳೆದ ವಾರ ನಡೆದ ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆಯಲ್ಲಿ ಕರ್ನಾಟಕದಿಂದ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವ ಕುರಿತು ಯಾವುದೇ ನಿರ್ದೇಶನ ನೀಡಲಾಗಿರಲಿಲ್ಲ. ಈ ನಿರ್ಧಾರಕ್ಕೆ ತಮಿಳುನಾಡು ಅಸಮಾಧಾನ ವ್ಯಕ್ತಪಡಿಸಿ, ವಿಚಾರವನ್ನು ವಿಳಂಬ ಮಾಡದೆ ಕಾವೇರಿ ನೀರು ನಿರ್ವಹಣ ಪ್ರಾಧಿಕಾರದ ಸಭೆ ಕರೆಯುವಂತೆ ಮನವಿ ಮಾಡಿತ್ತು.

ತಮಿಳುನಾಡಿನ ಮನವಿಯ ಬೆನ್ನಲ್ಲೇ ಕೇಂದ್ರ ಜಲ ಆಯೋಗದ ಅಧ್ಯಕ್ಷರ ನೇತೃತ್ವದಲ್ಲಿ ಕಾವೇರಿ ನೀರು ನಿರ್ವಹಣ ಪ್ರಾಧಿಕಾರದ ಸಭೆಯನ್ನು ಜುಲೈ 22ರಂದು ನಿಗದಿಪಡಿಸಲಾಗಿದೆ. ಸಭೆಯಲ್ಲಿ ಕರ್ನಾಟಕ, ತಮಿಳುನಾಡು, ಕೇರಳ ಹಾಗೂ ಪುದುಚೇರಿ ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ.

ಈ ಸಭೆಯಲ್ಲಿ ಪ್ರಸಕ್ತ ಮಳೆ ಪರಿಸ್ಥಿತಿ, ಕಾವೇರಿ ಜಲಾನಯನ ಪ್ರದೇಶದಲ್ಲಿನ ನೀರಿನ ಲಭ್ಯತೆ, ಜಲಾಶಯಗಳಲ್ಲಿನ ನೀರಿನ ಸಂಗ್ರಹ ಹಾಗೂ ಉಭಯ ರಾಜ್ಯಗಳ ವಾದಗಳನ್ನು ಪರಿಶೀಲಿಸಿ ಮುಂದಿನ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಹಲವು ಜಲಾಶಯಗಳಲ್ಲಿ ನೀರಿನ ಸಂಗ್ರಹ ನಿರೀಕ್ಷಿತ ಮಟ್ಟ ತಲುಪಿಲ್ಲ. ಇಂತಹ ಪರಿಸ್ಥಿತಿಯಲ್ಲಿಯೂ ತಮಿಳುನಾಡು ತನ್ನ ಪಾಲಿನ ನೀರನ್ನು ಬಿಡುಗಡೆ ಮಾಡುವಂತೆ ಪಟ್ಟು ಹಿಡಿದಿರುವುದು ಕರ್ನಾಟಕದ ಆತಂಕಕ್ಕೆ ಕಾರಣವಾಗಿದೆ. ಹೀಗಾಗಿ ಜುಲೈ 22ರಂದು ನಡೆಯಲಿರುವ ಕಾವೇರಿ ನೀರು ನಿರ್ವಹಣ ಪ್ರಾಧಿಕಾರದ ಸಭೆಯತ್ತ ಎರಡೂ ರಾಜ್ಯಗಳ ಗಮನ ಕೇಂದ್ರೀಕೃತವಾಗಿದೆ.

## ಮೇಕೆದಾಟು ವಿರೋಧಿಸಿ ಲೋಕಸಭೆಯಲ್ಲಿ ನಿಲುವಳಿ ಸೂಚನೆಗೆ ಡಿಎಂಕೆ ಪಟ್ಟು

**ದೆಹಲಿ, ಜು.20: ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ನೆರೆ ರಾಜ್ಯ ತಮಿಳುನಾಡು ಮತ್ತೆ ಆಕ್ಷೇಪ ತೆಗೆದಿದೆ. ಕರ್ನಾಟಕದ ಮೇಕೆದಾಟು ಯೋಜನೆಗೆ ಲೋಕಸಭೆಯಲ್ಲಿ ಡಿಎಂಕೆ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಕಲಾಪ ಆರಂಭವಾಗುತ್ತಿದ್ದಂತೆಯೇ ವಿಷಯ ಪ್ರಸ್ತಾಪ ಮಾಡಿದೆ. ಮೇಕೆದಾಟು ವಿಚಾರವಾಗಿ ನಿಲುವಳಿ ಸೂಚನೆಗೆ ಡಿಎಂಕೆ ಅವಕಾಶ ಕೋರಿದ್ದು, ತಕ್ಷಣವೇ ಚರ್ಚೆ ನಡೆಸಬೇಕು ಎಂದು ಪಟ್ಟುಹಿಡಿದ ಪ್ರಸಂಗ ನಡೆಯಿತು. ಡಿಎಂಕೆ ಸಂಸದೀಯ ಮಂಡಳಿ ನಾಯಕ ಟಿ.ಆರ್.ಬಾಲು ಈ ಬಗ್ಗೆ ಒತ್ತಾಯಿಸಿದ್ದು, ಪ್ರಸ್ತಾವನೆಗೆ ಸ್ಪೀಕರ್ ಓಂ ಬಿರ್ಲಾ ನಿರಾಕರಿಸಿದ ಕಾರಣ ಸಭಾಧ್ಯಕ್ಷರ ಪೀಠದ ಎದುರು ಡಿಎಂಕೆ ಸಂಸದರು ಪ್ರತಿಭಟನೆ ನಡೆಸಿದ್ದಾರೆ. ಬರದ ನಡುವೆಯೂ ನೀರು ಬಿಡುವಂತೆ ಕಾವೇರಿ ನೀರು ಹರಿಸುವಂತೆ ತಮಿಳುನಾಡು ಸರ್ಕಾರ ಪಟ್ಟು ಹಿನ್ನೆಲೆ ಬುಧವಾರ ದೆಹಲಿಯಲ್ಲಿ ಉನ್ನತಮಟ್ಟದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ ನಿಗದಿಯಾಗಿದೆ. ಕಳೆದ ವಾರ ನಡೆದ ಸಭೆಯಲ್ಲಿ ಕರ್ನಾಟಕಕ್ಕೆ ನೀರು ಹರಿಸುವ ಬಗ್ಗೆ ಯಾವುದೇ ಸೂಚನೆ ನೀಡಿರಲಿಲ್ಲ. ಹೀಗಾಗಿ ತಮಿಳುನಾಡು ಅಸಮಾಧಾನ ವ್ಯಕ್ತಪಡಿಸಿತ್ತು.**



ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆಯ ಶ್ರೀ ರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಪಾರ್ಥೀವ ಶರೀರದ ಅಂತ್ಯಕ್ರಿಯೆ ಸಕಲ ಸರ್ಕಾರಿ ಗೌರವಗಳೊಂದಿಗೆ ಸೋಮವಾರ ನೆರವೇರಿತು. ಪತ್ನಿ ಚೆನ್ನಮ್ಮ ಅವರಿಗೆ ಅಂತಿಮ ನಮನ ಸಲ್ಲಿಸಿದ ಎಚ್.ಡಿ.ದೇವೇಗೌಡ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363


21.07.2026
ಅಧ್ಯಕ್ಷರು: ಭಾರತೀಯ ರಾಷ್ಟ್ರೀಯ ಕಾಂಗ್ರೆಸ್
(ಎಐಸಿಸಿ) ಹಾಗೂ ರಾಜ್ಯಸಭೆಯ ವಿರೋಧ
ಪಕ್ಷದ ನಾಯಕರಾದ ಸನ್ಮಾನ್ಯಶ್ರೀ
ಮಲ್ಲಿಕಾರ್ಜುನ ಖರ್ಗೆ
ಅವರಿಗೆ...
ಜನ್ಮದಿನದ ಹಾರ್ದಿಕ
ಶುಭಾಶಯಗಳು
ಶುಭ ಕೋರುವವರು
ವಿಜಯಾನಂದ ಕಾಶಪ್ಪನವರ್
ಶಾಸಕರು, ಹುನಗುಂದ ವಿಧಾನಸಭಾ ಕ್ಷೇತ್ರ
ಬಾಗಲಕೋಟೆ ಜಿಲ್ಲೆ, ಕರ್ನಾಟಕ

## ನಿತ್ಯ ಪಂಚಾಂಗ 21.07.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ

ಆಷಾಢ ಶುದ್ಧ, ಸಪ್ತಮಿ, ಚಿತ್ತಾ ನಕ್ಷತ್ರ, ವೈವಸ್ವತ ಸಪ್ತಮಿ, ವೇಲೂರು ಪುಣ್ಯದಿನ, ಕೂಡಲಸಂಗಮ ಲಿಂಗಾನಂದಸ್ವಾಮಿ ಲಿಂಗೈಕ್ಯ ಸಂಸ್ಮರಣೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25–4.59 | 9.00–10.30 | 12.00– 1.30 |
| ಬುಧ | ಮ.12.16–1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42– 12.16 | 3.00– 4.30 | 7.30– 9.00 |
| ಶನಿ | ಬೆ. 9.07– 10.41 | 1.30– 3.00 | 6.00– 7.30 |

# ಮಾವಿನಕೆರೆ ರಂಗನಾಥಸ್ವಾಮಿ ಬೆಟ್ಟದ ತಪ್ಪಲಲ್ಲಿ ಚೆನ್ನಮ್ಮ ಅಂತಿಮ ಸಂಸ್ಕಾರ



**ಬೆಂಗಳೂರು, ಜು.2:** ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆಯ ಶ್ರೀ ರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಪಾರ್ಥೀವ ಶರೀರದ ಅಂತ್ಯಕ್ರಿಯೆ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು. ನೆರೆದಿದ್ದ ಅಪಾರ ಬಂಧು–ಬಳಗ, ಗಣ್ಯಾತಿಗಣ್ಯರ ಸಮುಖದಲ್ಲಿ ಒಕ್ಕಲಿಗ ಸಂಪ್ರದಾಯದಂತೆ ಧಾರ್ಮಿಕ ವಿಧಿ–ವಿಧಾನಗಳ ಮೂಲಕ ಚೆನ್ನಮ್ಮ ಅವರ ಅಂತ್ಯಕ್ರಿಯೆ ನಡೆಸಲಾಯಿತು. ಪಂಚಭೂತಗಳಲ್ಲಿ ಚೆನ್ನಮ್ಮ ಅವರ ಪಾರ್ಥೀವ ಶರೀರ ಲೀನವಾಯಿತು. ಇದಕ್ಕೂ ಮುನ್ನ ಪೊಲೀಸರು ಗಾಳಿಯಲ್ಲಿ ಗುಂಡು ಹಾರಿಸುವ ಮೂಲಕ ಸರ್ಕಾರಿ ಗೌರವ ಸಲ್ಲಿಸಿದರು. ಪಾರ್ಥಿವ ಶರೀರದ ಮೇಲೆ ಹೊದಿಸಿದ್ದ ರಾಷ್ಟ್ರಧ್ವಜವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ದೇವೇಗೌಡರ ಕುಟುಂಬಕ್ಕೆ ಹಸ್ತಾಂತರಿಸಿದರು. ಮೇಲುಕೋಟೆಯ ಪುರೋಹಿತರಾದ ಕಣ್ಣನ್‌ಸ್ವಾಮಿ ಅವರು ಅಂತ್ಯಕ್ರಿಯೆಯ ವಿಧಿ–ವಿಧಾನಗಳನ್ನು ಶಾಸ್ತ್ರೋಕ್ತವಾಗಿ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಪುತ್ರರಾದ ಕೇಂದ್ರ ಸಚಿವ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ರೇವಣ್ಣ, ಬಾಲಕೃಷ್ಣೇಗೌಡ, ರಮೇಶ್, ಪುತ್ರಿಯರಾದ ಅನುಸೂಯ, ಶೈಲಜಾ, ಅಳಿಯಂದಿರಾದ ಸಂಸದ ಡಾ.ಸಿ.ಎನ್.ಮಂಜುನಾಥ್, ಡಾ.ಚಂದ್ರಶೇಖರ್ ಸೇರಿದಂತೆ ಸೊಸೆಯಂದಿರು, ಮೊಮಕ್ಕಳು ಅಂತಿಮ ವಿಧಿ–ವಿಧಾನಗಳಲ್ಲಿ ಭಾಗಿಯಾದರು.

ಈ ಸಂದರ್ಭದಲ್ಲಿ ದೇವೇಗೌಡರು, ರೇವಣ್ಣ, ಕುಮಾರಸ್ವಾಮಿ ಮೊದಲಾದ ಕುಟುಂಬಸ್ಥರು ಚೆನ್ನಮ್ಮ ಅವರ ಅಗಲಿಕೆಯ ದುಃಖ ತಾಳಲಾರದೇ ಕಂಬನಿ ಮಿಡಿದರು. ಅಂತ್ಯಕ್ರಿಯೆ ಸಂದರ್ಭದಲ್ಲಿ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ.ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಪಟ್ಟನಾಯಕನಹಳ್ಳಿ ಮಠದ ಶ್ರೀ ನಂಜಾವಧೂತ ಸ್ವಾಮೀಜಿ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ, ಶಿವರಾಜ್ ಸಿಂಗ್ ಚೌಹಾಣ್, ಸಭಾಪತಿ ಬಸವರಾಜ್ ಹೊರಟಿ, ಸಚಿವರಾದ ಕೃಷ್ಣಭೈರೇಗೌಡ, ಕೆ.ಜೆ.ಜಾರ್ಜ್, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಬಸವರಾಜ ಬೊಮ್ಮಾಯಿ, ಸಂಸದರಾದ ಗೋವಿಂದ್ ಕಾರಜೋಳ್, ಸುಧಾಕರ್, ಶ್ರೇಯಸ್ ಪಟೇಲ್, ಬಿ.ವೈ. ರಾಘವೇಂದ್ರ, ಮಲ್ಲೇಶ್ ಬಾಬು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವರಾದ ಚಲುವರಾಯಸ್ವಾಮಿ, ಎಚ್.ಕೆ.ಕುಮಾರಸ್ವಾಮಿ, ಬಂಡೆಪ್ಪ ಕಾಶಂಪೂರ್, ಸಿ.ಎಸ್.ಪುಟ್ಟರಾಜು, ರೋಷನ್ ಬೇಗ್, ಎ.ಮಂಜು, ಸ್ವರೂಪ್ ಪ್ರಕಾಶ್, ಸಿ.ಎನ್.ಬಾಲಕೃಷ್ಣ, ಟಿ.ಎ.ಶರವಣ, ಮಾಜಿ ಸಚಿವರಾದ ವೈಎಸ್‌ವಿ ದತ್ತ ಸೇರಿದಂತೆ ಶಾಸಕರು, ವಿವಿಧ ಪಕ್ಷಗಳ ನಾಯಕರು ಉಪಸ್ಥಿತರಿದ್ದು, ಚೆನ್ನಮ್ಮ ಅವರಿಗೆ ಅಂತಿಮ ನಮನ ಸಲ್ಲಿಸಿದರು.

ನೆರೆದಿದ್ದ ಅಪಾರ ಜನಸ್ತೋಮದ ಅಶ್ರುತರ್ಪಣದ ನಡುವೆ ಚೆನ್ನಮ್ಮ ಅವರಿಗೆ ಅಂತಿಮ ವಿದಾಯ ಹೇಳಲಾಯಿತು. ಶನಿವಾರ ಸಂಜೆ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದ ಚೆನ್ನಮ್ಮ ಅವರ ಪಾರ್ಥಿವ ಶರೀರವನ್ನು ಅಂದು ರಾತ್ರಿ ಪದ್ಮನಾಭನಗರದ ನಿವಾಸಕ್ಕೆ ತಂದು ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಶನಿವಾರ ರಾತ್ರಿಯಿಂದ ನಿನ್ನೆ ಮಧ್ಯಾಹ್ನದವರೆಗೂ ಗಣ್ಯರು, ಸಾರ್ವಜನಿಕರು ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದರು.

ಭಾನುವಾರ ಬೆಂಗಳೂರಿನಿಂದ ಹಾಸನದ ಕಡೆಗೆ ವಾಹನದಲ್ಲಿ ಚೆನ್ನಮ್ಮ ಅವರ ಪಾರ್ಥೀವ ಶರೀರವನ್ನು ಕೊಂಡೊಯ್ಯಲಾಯಿತು. ಮಾರ್ಗದ ಹಲವೆಡೆ ಜನರು ಅಂತಿಮ ದರ್ಶನ ಪಡೆದರು. ಹಾಸನ ನಗರದಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ನೀಡಲಾಗಿತ್ತು. ಇಂದು ಮುಂಜಾನೆ 5 ಗಂಟೆ ವೇಳೆಗೆ ಹೊಳೆನರಸೀಪುರದ ರೇವಣ್ಣ ಅವರ ನಿವಾಸಕ್ಕೆ ಪಾರ್ಥೀವ ಶರೀರವನ್ನು ತಂದು ಮಧ್ಯಾಹ್ನದ ವರೆಗೂ ಸಾರ್ವಜನಿಕರ ದರ್ಶನಕ್ಕೆ ಅನುವು ಮಾಡಿಕೊಡಲಾಗಿತ್ತು. ಅಂತಿಮ ದರ್ಶನ ಪಡೆದ ಗಣ್ಯರು, ವಿವಿಧ ರಾಜಕೀಯ ಪಕ್ಷದ ನಾಯಕರು, ಮುಖಂಡರು, ಸಂಘಸಂಸ್ಥೆಗಳ ಪ್ರತಿನಿಧಿಗಳು, ಅಭಿಮಾನಿಗಳು, ಬಂಧು–ಬಳಗದವರು ಚೆನ್ನಮ್ಮ ಅವರ ಅಂತಿಮ ದರ್ಶನ ಪಡೆದರು.

## ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಣೆ ಆತಂಕಕಾರಿ: ಅಶೋಕ್ ವಾಗ್ದಾಳಿ



**ಬೆಂಗಳೂರು, ಜು.20:** ರಾಜ್ಯದಲ್ಲಿ ಮನೆ ಬಾಗಿಲಿಗೆ ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಣೆಗೆ ರಾಜ್ಯ ಸರ್ಕಾರ ಚಾಲನೆ ನೀಡಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯ ಸರ್ಕಾರ ಇದನ್ನು ಆಡಳಿತ ಸುಧಾರಣೆ ಎಂದು ಬಿಂಬಿಸಲು ಪ್ರಯತ್ನಿಸುತ್ತಿದೆ. ಆದರೆ ಇದು ಸಂವಿಧಾನ ಬಾಹಿರ ಮತ್ತು ಕಾನೂನು ಬಾಹಿರ ಕ್ರಮವಾಗಿದೆ ಎನ್ನುವುದನ್ನು ರಾಜ್ಯದ ಜನರು ಅರಿತುಕೊಳ್ಳಬೇಕು ಎಂದು ಹೇಳಿದ್ದಾರೆ.

ಸಂವಿಧಾನದ ಪ್ರಕಾರ ಪೌರತ್ವ, ವಿದೇಶಿಯರ ಗುರುತಿಸುವಿಕೆ, ವಲಸೆ ಸಂಬಂಧಿಸಿದ ವಿಷಯಗಳು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರಲಿವೆ. ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರ ತನ್ನ ಅಧಿಕಾರದ ಮಿತಿಯನ್ನು ಮೀರಿ ನಡೆದುಕೊಳ್ಳುತ್ತಿರುವುದು ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾದುದು ಎಂದು ತಿಳಿಸಿದ್ದಾರೆ.

ದೇಶಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿದೆ. ಇಂತಹ ಸಂದರ್ಭದಲ್ಲಿ ಶಾಶ್ವತ ನಿವಾಸಿ ಪ್ರಮಾಣಪತ್ರ ನೀಡಲು ಮುಂದಾಗಿರುವ ರಾಜ್ಯ ಸರ್ಕಾರ ಆತುರದ ನಡೆ ಅನುಸರಿಸುತ್ತಿದೆ. ಅಕ್ರಮ ವಲಸಿಗರಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ, ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಳ್ಳಲು ಸರ್ಕಾರವೇ ಅವಕಾಶ ಮಾಡಿಕೊಡುತ್ತಿದೆ. ಇದು ಒಳ್ಳೆಯ ಬೆಳವಣಿಗೆಯಲ್ಲ ಎಂದು ಹೇಳಿದ್ದಾರೆ.

ಕಂದಾಯ ಇಲಾಖೆಯ ಮೂಲಕ ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಣೆಗೆ ಮುಂದಾಗಿರುವುದು ಭ್ರಷ್ಟಾಚಾರ, ನಕಲಿ ದಾಖಲೆಗಳ ಸೃಷ್ಟಿ ಹಾಗೂ ಅಧಿಕಾರ ದುರುಪಯೋಗಕ್ಕೆ ಅವಕಾಶ ಮಾಡಿಕೊಡಲಿದೆ. ಮತ ಬ್ಯಾಂಕ್ ರಾಜಕಾರಣಕ್ಕಾಗಿ ರಾಜ್ಯದ ಭವಿಷ್ಯವನ್ನು ಪಣಕ್ಕಿಡುವ ಕೆಲಸವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ತಕ್ಷಣವೇ ನಿಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಜನರಿಗೆ ತೊಂದರೆಯಾಗದಂತೆ ಕ್ರಮ

### ಜಾತಿ ಹಾಗೂ ಶಾಶ್ವತ ನಿವಾಸ ಪ್ರಮಾಣಪತ್ರ ಪಡೆಯಲು ಮಾನದಂಡ ನಿಗದಿ: ಡಾ.ಜಿ.ಪರಮೇಶ್ವರ್



**ಬೆಂಗಳೂರು, ಜು.20:** ಕೇಂದ್ರ ಸರ್ಕಾರದ ಎಸ್‌ಐಆರ್ ಪ್ರಕ್ರಿಯೆಗೆ ಅಗತ್ಯ ದಾಖಲೆಗಳನ್ನು ಜನರು ಸುಲಭವಾಗಿ ಒದಗಿಸುವ ಉದ್ದೇಶದಿಂದ ಮನೆ ಮನೆಗೆ ಉಚಿತ ಜಾತಿ ಪ್ರಮಾಣಪತ್ರ ಹಾಗೂ ಶಾಶ್ವತ ನಿವಾಸ ಪ್ರಮಾಣಪತ್ರ ವಿತರಿಸಲಾಗುತ್ತಿದೆ. ಶಾಶ್ವತ ನಿವಾಸ ಪ್ರಮಾಣಪತ್ರ ಪಡೆಯಲು ಕೆಲವು ಮಾನದಂಡಗಳನ್ನು ನಿಗದಿ ಪಡಿಸಿದ್ದೇವೆ ಎಂದು ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಅರ್ಜಿದಾರರು ಕರ್ನಾಟಕದಲ್ಲಿ ಜನಿಸಿರಬೇಕು ಅಥವಾ ನಿಗದಿತ ಅರ್ಹತೆಗಳನ್ನು ಪೂರೈಸಿರಬೇಕು. ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸಿಸಿರಬೇಕು. ಕರ್ನಾಟಕದಲ್ಲೇ ದ್ವಿತೀಯ ಪಿಯುಸಿ ಅಥವಾ ತತ್ಸಮಾನ ಶಿಕ್ಷಣ ಪೂರ್ಣಗೊಳಿಸಿರಬೇಕು. ರಾಜ್ಯದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡಿರಬೇಕು. ಸರ್ಕಾರ ಅಥವಾ ಸ್ಥಳೀಯ ಸಂಸ್ಥೆಗಳಲ್ಲಿ ಕನಿಷ್ಠ 7 ವರ್ಷ ಸೇವೆ ಸಲ್ಲಿಸಿರಬೇಕು. ತಂದೆ, ತಾಯಿ, ಪತಿ ಅಥವಾ ಪತ್ನಿ ಕರ್ನಾಟಕದಲ್ಲಿ ಕನಿಷ್ಠ 10 ವರ್ಷ ವಾಸಿಸಿರುವ ದಾಖಲೆ ಇರಬೇಕು. ಕರ್ನಾಟಕದಲ್ಲಿ ಸ್ಥಿರಾಸ್ತಿ ಹೊಂದಿರಬೇಕು ಅಥವಾ ಕಾನೂನುಬದ್ಧವಾಗಿ ಉಪಯೋಗಿಸುತ್ತಿರಬೇಕು. ಮತದಾರರ ಪಟ್ಟಿಯಲ್ಲಿ ಹೆಸರು ಇರಬೇಕು. ಕರ್ನಾಟಕದ ನಿವಾಸಿಯನ್ನು ವಿವಾಹವಾಗಿದ್ದರೆ ರಾಜ್ಯದಲ್ಲೇ ವಾಸಿಸುತ್ತಿರಬೇಕು ಎಂಬೆಲ್ಲ ಅಂಶಗಳನ್ನು ಒಳಗೊಂಡಿರುವ ಮಾನದಂಡಗಳು ಇರುವುದಾಗಿ ಡಾ.ಜಿ. ಪರಮೇಶ್ವರ್ ವಿವರಿಸಿದರು.

### ಪಾರದರ್ಶಕ ಪರೀಕ್ಷೆ: ಕೇಂದ್ರದ ಕರ್ತವ್ಯ

ನೀಟ್ ಪರೀಕ್ಷಾ ಅಕ್ರಮಕ್ಕೆ ಸಂಬಂಧಿಸಿ ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿರುವ ಬಗ್ಗೆ ಹಾಗೂ ಸಂಸತ್ತಿನಲ್ಲಿಯೂ ಈ ವಿಚಾರ ಪ್ರಸ್ತಾಪವಾಗಿರುವ ಬಗ್ಗೆ ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಅವರು, ಇದು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಪ್ರಶ್ನೆ. ಮೊದಲ ಪ್ರಯತ್ನದಲ್ಲೇ ಉತ್ತೀರ್ಣರಾಗಿದ್ದ ಕೆಲ ವಿದ್ಯಾರ್ಥಿಗಳು ಎರಡನೇ ಬಾರಿ ಪರೀಕ್ಷೆ ಎದುರಿಸಿದಾಗ ಉರ್ತೀರ್ಣರಾಗಿಲ್ಲ. ಈ ಕುರಿತು ಮಾಧ್ಯಮಗಳೂ ವರದಿ ಮಾಡಿವೆ. ಯಾವುದೇ ಸಮಸ್ಯೆ ಉದ್ಭವಿಸದಂತೆ ಪರೀಕ್ಷೆಗಳನ್ನು ಕಟ್ಟುನಿಟ್ಟಾಗಿ ಮತ್ತು ಪಾರದರ್ಶಕವಾಗಿ ನಡೆಸುವುದು ಕೇಂದ್ರ ಸರ್ಕಾರದ ಕರ್ತವ್ಯವಾಗಿದೆ ಎಂದು ಹೇಳಿದರು.

### ಬರ: ಕೇಂದ್ರಕ್ಕೆ ಪತ್ರ

ರಾಜ್ಯದಲ್ಲಿ ತಲೆದೋರಿರುವ ಬರ ಪರಿಸ್ಥಿತಿಯನ್ನು ಸರ್ಕಾರ ಹೇಗೆ ಎದುರಿಸುತ್ತಿದೆ ಎಂಬ ಮಾಧ್ಯಮದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಉಪ ಮುಖ್ಯಮಂತ್ರಿಗಳು, ಈ ವಿಚಾರವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ನಾನು ಮತ್ತು ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದೇವೆ. ಆದರೆ ಇದುವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಕೇಂದ್ರ ಸರ್ಕಾರ ನಮ್ಮ ಮನವಿಗೆ ಸ್ಪಂದಿಸಬೇಕು. ಏಕೆಂದರೆ ಇದು ಕಳೆದ 150 ವರ್ಷಗಳಲ್ಲೇ ಕಂಡುಬಂದಿರುವ ಅತ್ಯಂತ ತೀವ್ರ ಬರ ಪರಿಸ್ಥಿತಿಯಾಗಿದೆ. ಕೇವಲ ಎರಡು ಅಥವಾ ಮೂರು ಜಿಲ್ಲೆಯಲ್ಲ, ಇಡೀ ರಾಜ್ಯವೇ ಬರವನ್ನು ಎದುರಿಸುತ್ತಿದೆ. ಪರಿಸ್ಥಿತಿಯ ಗಂಭೀರತೆಯನ್ನು ಮನಗಂಡೇ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಡಾ.ಜಿ. ಪರಮೇಶ್ವರ್ ತಿಳಿಸಿದರು.

## ಆರ್‌ಎಸ್‌ಎಸ್ ಅಂಗಸಂಸ್ಥೆಗಳಿಗೆ ಸರ್ಕಾರಿ ಸ್ವಾಮ್ಯದ ಕಂಪನಿಗಳಿಂದ ನೂರಾರು ಕೋಟಿ ದೇಣಿಗೆ: ಬಿ.ಕೆ. ಹರಿಪ್ರಸಾದ್ ಆರೋಪ



**ಬೆಂಗಳೂರು, ಜು.20:** ಆರ್‌ಎಸ್‌ಎಸ್ ಅಂಗಸಂಸ್ಥೆಗಳಿಗೆ ಸಾರ್ವಜನಿಕ ಸ್ವಾಮ್ಯದ ಸಂಸ್ಥೆಗಳಿಂದ ನೂರಾರು ಕೋಟಿ ಹಣ ಹರಿದು ಬರುತ್ತಿದೆ, ಆದರೆ ಸಂಘ ಪರಿವಾರ ಮಾತ್ರ ತಾನು ಸರ್ಕಾರಿ ಹಣ ಪಡೆದುಕೊಳ್ಳುವುದಿಲ್ಲ ಎಂದು ಹೇಳಿಕೊಳ್ಳುತ್ತದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಕಿಡಿಕಾರಿದ್ದಾರೆ.

ಕಳೆದ ಒಂದು ದಶಕದಲ್ಲಿ ಸಾರ್ವಜನಿಕ ಸ್ವಾಮ್ಯದ ಆಯಿಲ್ ಅಂಡ್ ನ್ಯಾಚುರಲ್ ಗ್ಯಾಸ್ ಕಾರ್ಪೊರೇಷನ್ (ಒಎನ್‌ಜಿಸಿ) ಸಂಸ್ಥೆಯ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ನಿಧಿಯಿಂದ ರೂ. 668 ಕೋಟಿಗೂ ಅಧಿಕ ಹಣ ಆರ್‌ಎಸ್‌ಎಸ್ ನಂಟು ಹೊಂದಿರುವ 20 ಸಂಸ್ಥೆಗಳಿಗೆ ಹರಿದುಬಂದಿದೆ ಎಂಬ ಗಂಭೀರ ವಿಚಾರ ತನಿಖಾ ವರದಿಯೊಂದರಿಂದ ಬಯಲಾಗಿತ್ತು. ಟಿ.ಎನ್.ಎಂ ಈ ವರದಿ ಉಲ್ಲೇಖಿಸಿ, ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಸಂಘ ಪರಿವಾರದ ಹಣಕಾಸು ಮೂಲಗಳು ಹಾಗೂ ಪಾರದರ್ಶಕತೆಯ ಬಗ್ಗೆ ಸಾಮಾಜಿಕ ಮಾಧ್ಯಮದ ಮೂಲಕ ಪ್ರಶ್ನಿಸಿದ್ದಾರೆ.

ದೇವಸ್ಥಾನಗಳ ಕಾಣಿಕೆಗಳು ಮತ್ತು ವಿಪತ್ತು ಪರಿಹಾರ ನಿಧಿಯಿಂದ ಹಿಡಿದು, ಕೋವಿಡ್ ಪರಿಹಾರ, ಸಾರ್ವಜನಿಕ ಭೂಮಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ನಿಧಿಗಳವರೆಗೆ ಸಾರ್ವಜನಿಕ ಹಣವನ್ನು ಸಂಘಕ್ಕೆ ಧಾರೆಯೆರೆಯಲಾಗುತ್ತಿದೆ. ತಾವು ಯಾವುದೇ ಸರ್ಕಾರಿ ಧನಸಹಾಯವನ್ನು ಪಡೆಯುವುದಿಲ್ಲ ಎಂದು ಆರ್.ಎಸ್.ಎಸ್ ಸದಾ ಹೇಳಿಕೊಳ್ಳುತ್ತದೆ. ಆದರೆ, ತೆರಿಗೆದಾರರ ಬೆಂಬಲಿತ ಸಾರ್ವಜನಿಕ ಸಂಸ್ಥೆಗಳು ನಿಮ್ಮ ಅಂಗಸಂಸ್ಥೆಗಳಿಗೆ ಮುಕ್ತವಾಗಿ ಹಣಕಾಸಿನ ನೆರವು ನೀಡುತ್ತಿರುವಾಗ, ಆರ್‌ಎಸ್‌ಎಸ್ ಸರ್ಕಾರಿ ಹಣದಿಂದ ಸ್ವತಂತ್ರವಾಗಿದೆ ಎಂದು ಯಾವ ನೈತಿಕತೆಯಲ್ಲಿ ಹೇಳಿಕೊಳ್ಳಲು ಸಾಧ್ಯ ಎಂದು ಅವರು ಪ್ರಶ್ನಿಸಿದ್ದಾರೆ.

ಸಮುದ್ರದಷ್ಟು ಸಾರ್ವಜನಿಕ ಹಣವನ್ನು ಪಡೆಯುತ್ತಿರುವ ಆರ್‌ಎಸ್‌ಎಸ್ ಎಂಬ ಕನಿಷ್ಠ ನೋಂದಾವಣೆ ಇಲ್ಲದ ಸಂಘಟನೆ, ತನ್ನ ನಿಧಿಯ ಮೂಲಗಳ ಬಗ್ಗೆ ಯಾವುದೇ ಮಾಹಿತಿ ನೀಡದೆ ನುಣುಚಿಕೊಳ್ಳುತ್ತಿದೆ. ಇದು ಕೇವಲ ನೋಂದಣಿಯದ್ದಷ್ಟೇ ಅಲ್ಲದೆ, ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಸಾರ್ವಜನಿಕ ಹಣವನ್ನು ಹೇಗೆ ಖರ್ಚು ಮಾಡಲಾಗುತ್ತಿದೆ ಎಂಬುದನ್ನು ತಿಳಿದುಕೊಳ್ಳುವ ಪ್ರತಿಯೊಬ್ಬ ನಾಗರಿಕನ ಹಕ್ಕಿನ ಪ್ರಶ್ನೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# 178 ತಾಲೂಕಲ್ಲಿ ಮಳೆ ಕೊರತೆ: ವಲಸೆ ತಡೆಯಲು ಕ್ರಮ

## ಗ್ರಾಮದಲ್ಲೇ ವಿಬಿ ಜಿ ರಾಮ್ ಜಿ ಉದ್ಯೋಗ ನೀಡಲು ಖಂಡ್ರೆ ಸೂಚನೆ

**ಬೆಂಗಳೂರು, ಜು.20:** ರಾಜ್ಯದ 178 ತಾಲೂಕುಗಳಲ್ಲಿ ಮಳೆಯ ಕೊರತೆ ಆಗಿದ್ದು, 60 ತಾಲೂಕುಗಳಲ್ಲಿ ತೀವ್ರ ಮಳೆ ಕೊರತೆ ಆಗಿದೆ. ಹೀಗಾಗಿ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಲು ಮತ್ತು ಯಾರೂ ಗುಳೆ ಹೋಗದಂತೆ ಗ್ರಾಮಗಳಲ್ಲೇ ಉದ್ಯೋಗ ನೀಡಲು ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಕೊರತೆ ಆಗಬಾರದು ಎಂದು 117 ಕೋಟಿ ರೂ. ಮುಂಗಡವಾಗಿ ಬಿಡುಗಡೆ ಮಾಡಿದ್ದೇವೆ. 95 ಕೋಟಿ ರೂ. ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಇನ್ನೂ 25 ಕೋಟಿ ರೂ. ವಿವಿಧ ಜಿಲ್ಲೆಗಳಲ್ಲಿ ಇದೆ ಎಂದು ಸ್ಪಷ್ಟಪಡಿಸಿದರು.

ಯಾವುದೇ ಗ್ರಾಮದಲ್ಲಿ, ತಾಂಡಾದಲ್ಲಿ ಮೇಲ್ಮೈ ನೀರು ದೊರಕದೆ, ನೀರು ಪೂರೈಸುವ ಕೊಳವೆ ಬಾವಿಗಳು ಬತ್ತಿದ್ದರೆ, ಖಾಸಗಿ ಬೋರ್‌ವೆಲ್, ಬಾವಿ ಬಾಡಿಗೆಗೆ ಪಡೆದು ಟ್ಯಾಂಕರ್ ಮೂಲಕ ನೀರು ಪೂರೈಸಲು ತೀರಾ ಅನಿವಾರ್ಯ ಪರಿಸ್ಥಿತಿಯಲ್ಲಿ ಕೊಳವೆ ಬಾವಿ ಕೊರೆಯಲು ಅನುಮತಿಸಲಾಗಿದೆ ಎಂದು ತಿಳಿಸಿದರು.

ಇನ್ನೂ ಮೂರು ನಾಲ್ಕು ತಿಂಗಳು ಮಳೆಯೇ ಬಾರದಿದ್ದರೆ ಮುಂದಿನ ವರ್ಷ ಮುಂಗಾರು ಆರಂಭವಾಗುವವರೆಗೆ ನೀರಿನ ಕೊರತೆ ಆಗದಂತೆ ಏನೆಲ್ಲಾ ಕ್ರಮ ಕೈಗೊಳ್ಳಬಹುದು ಎಂಬ ಕ್ರಮಗಳನ್ನು ಕೈಗೊಳ್ಳಲಾಗುವುದು, ಇದಕ್ಕೂ ಅಧ್ಯಯನ, ಸಿದ್ಧತೆ ನಡೆದಿದೆ ಎಂದರು.

ಬ್ಯಾಂಕ್ ಸಾಲ ಬಾಕಿ ಇರುವ ರೈತರು ಮತ್ತು ಸಾಲವನ್ನು ಒಂದು ಬಾರಿ ಇತ್ಯರ್ಥ ಮಾಡಿಕೊಂಡಿರುವ ರೈತರು ಸಮುದಾಯ ಸೇವಾ ಕೇಂದ್ರದಲ್ಲಿ ಬೆಳೆ ವಿಮೆ ಕಂತು ಕಟ್ಟಲು ಅವಕಾಶ ಕಲ್ಪಿಸಲಾಗಿದೆ. ಹೀಗಾಗಿ ರೈತರು ತಾವು ಬಿತ್ತನೆ ಮಾಡಿರುವ ಬೆಳೆಗೆ ವಿಮೆ ಮಾಡಿಸಬೇಕು ಎಂದು ಈಶ್ವರ ಖಂಡ್ರೆ ತಿಳಿಸಿದರು.

**5 ಲಕ್ಷ ಮಾನವದಿನ ಉದ್ಯೋಗ ಸೃಷ್ಟಿ:** ಕೇಂದ್ರ ಸರ್ಕಾರ ನರೇಗಾದಡಿ ನೀಡುತ್ತಿದ್ದ 90:10 ಅನುಪಾತ ಬದಲಿಸಿ 60:40 ಅನುಪಾತ ಮಾಡಿದ್ದು, ರಾಜ್ಯದ ಮೇಲೆ ಹೊರೆಯಾಗಿದ್ದರೂ ಕೂಡ ಬಡವರ, ಗ್ರಾಮೀಣರ, ದಲಿತರ, ವಂಚಿತರ ಹಿತದೃಷ್ಟಿಯಿಂದ ಜುಲೈ 1ರಿಂದ ಯೋಜನೆ ಜಾರಿಗೆ ತಂದಿದ್ದು, ಶನಿವಾರದವರೆಗೆ 5 ಲಕ್ಷ ಮಾನವದಿನ ಉದ್ಯೋಗ ಸೃಷ್ಟಿಸಲಾಗಿದೆ. ರಾಜ್ಯದ ಗ್ರಾಮ ಪಂಚಾಯತಿಗೆ ಉದ್ಯೋಗ ಕೇಳಿ ಬಂದವರಿಗೆಲ್ಲಾ ಉದ್ಯೋಗ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದರು.

ವಿಬಿಜಿ ರಾಮ್ ಜಿಯಡಿ 318 ಕಾಮಗಾರಿ ಕೈಗೆತ್ತಿಕೊಳ್ಳಲು ಅವಕಾಶವಿದ್ದು, ಹೊಸದಾಗಿ ಹೆಚ್ಚುವರಿ ಕ್ರಿಯಾಯೋಜನೆ ಸಲ್ಲಿಸಲು ಪೋರ್ಟಲ್‌ನಲ್ಲಿ ಅವಕಾಶವಿದೆ.

ಜೊತೆಗೆ ಶಾಲಾ ಕೊಠಡಿ, ಆರೋಗ್ಯ ಕೇಂದ್ರ, ಸರ್ಕಾರಿ ಕಟ್ಟಡಗಳ ದುರಸ್ತಿ, ನಿರ್ವಹಣೆ, ಕೃಷಿ ಹೊಂಡ, ವಿತರಣಾ ಕಾಲುವೆ, ಹನಿ ನೀರಾವರಿ, ಕಿರು ಅರಣ್ಯದಂತಹ ಯೋಜನೆಗಳನ್ನೂ ಕೈಗೊಳ್ಳಲು ಅವಕಾಶವಿದ್ದು, ಗ್ರಾಮೀಣ ಜನರು ಇದರ ಸದುಪಯೋಗ ಪಡೆಯಬೇಕು ಎಂದು ಸಚಿವರು ಮನವಿ ಮಾಡಿದರು.

ಈ ತಿಂಗಳಾಂತ್ಯದೊಳಗೆ ವಿಬಿ ಜಿ ರಾಮ್ ಜಿ ಅಡಿ 10 ಲಕ್ಷ ಮಾನವ ದಿನ ಸೃಜಿಸಲಾಗುವುದು. ಆದರೆ ಪ್ರತಿ ತಿಂಗಳೂ 1.25 ಕೋಟಿ ಮಾನವ ದಿನ ಉದ್ಯೋಗ ಸೃಷ್ಟಿ ಗುರಿಯಿದ್ದು, ಮೊದಲ ತ್ರೈಮಾಸಿಕದಲ್ಲಿ 2900 ಕೋಟಿ ರೂ. ಬಿಡುಗಡೆ ಆಗಿದೆ. ಹೀಗಾಗಿ ಗ್ರಾಮೀಣ ಭಾಗದಲ್ಲಿ ಉದ್ಯೋಗದ ಸಮಸ್ಯೆ ಬರುವುದಿಲ್ಲ ಎಂದು ಈಶ್ವರ ಖಂಡ್ರೆ ತಿಳಿಸಿದರು.

ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಚೀಟಿ (ಜಾಬ್ ಕಾರ್ಡ್) ಹೊಂದಿರುವ ಪ್ರತಿಯೊಬ್ಬರಿಗೂ 125 ದಿನ ಉದ್ಯೋಗ ದೊರಕಲಿದೆ.

ರೈತರ ಆತ್ಮಹತ್ಯೆಯ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ರೈತರು ಈ ದೇಶದ ಬೆನ್ನೆಲುಬು, ಅವರು ಅನ್ನದಾತರು, ಯಾರೂ ಆತ್ಮವಿಶ್ವಾಸ ಕಳೆದುಕೊಳ್ಳಬಾರದು, ಆತ್ಮಹತ್ಯೆಯೇ ಪರಿಹಾರವಲ್ಲ, ಯಾರೂ ಆ ತಪ್ಪ ಮಾಡಬಾರದು ಸರ್ಕಾರ ಅನ್ನದಾತರ ರಕ್ಷಣೆಗೆ ಸದಾ ನಿಲ್ಲುತ್ತದೆ ಎಂದು ಹೇಳಿದರು.

### ಮೇಕೆದಾಟು ಯೋಜನೆಗೆ ತಮಿಳುನಾಡು ವಿರೋಧ ಸರಿಯಲ್ಲ



ಮೇಕೆದಾಟು ಕುಡಿಯುವ ನೀರು ಮತ್ತು ವಿದ್ಯುತ್ ಉತ್ಪಾದನೆಯ ಯೋಜನೆಯಾಗಿದ್ದು, ಇದಕ್ಕೆ ತಮಿಳುನಾಡು ಆಕ್ಷೇಪ, ವಿರೋಧ ವ್ಯಕ್ತಪಡಿಸುವುದು ಸರಿಯಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ. ಕುಡಿಯುವ ನೀರು ಪ್ರತಿಯೊಬ್ಬರ ಮೂಲಭೂತ ಹಕ್ಕು, ರಾಜಕೀಯ ಕಾರಣಕ್ಕಾಗಿ ವಿರೋಧ ಮಾಡುವುದು ಸರ್ವಥಾ ಸಮರ್ಥನೀಯವಲ್ಲ. ಬೆಂಗಳೂರಿನಲ್ಲಿ 1 ಕೋಟಿಗೂ ಹೆಚ್ಚು ಜನರಿದ್ದು, ಕುಡಿಯುವ ನೀರು ಪೂರೈಸಲು ಮತ್ತು ಜಲ ವಿದ್ಯುತ್ ಉತ್ಪಾದಿಸಲು ರಾಜ್ಯ ಸರ್ಕಾರ ಈ ಯೋಜನೆ ರೂಪಿಸಿದ್ದು, ಈ ಯೋಜನೆಯಿಂದ ತಮಿಳುನಾಡಿಗೂ ಲಾಭವಾಗುತ್ತದೆ. ಹೀಗಾಗಿ ನೆರೆ ರಾಜ್ಯ ಬೆಂಬಲ ನೀಡಬೇಕೇ ಹೊರತು ವಿರೋಧ ಮಾಡಬಾರದು ಎಂದರು.

## ಕೆಪಿಎಸ್‌ಸಿ: ಗ್ರಂಥಪಾಲಕ ಹುದ್ದೆಗಳ ಅಂತಿಮ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಜು.20:** ಕರ್ನಾಟಕ ಲೋಕಸೇವಾ ಆಯೋಗವು ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಅಧಿಸೂಚಿಸಲಾಗಿದ್ದ ಗ್ರಂಥಪಾಲಕ–03 (ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿ ಹಾಗೂ ಕಟ್ ಆಫ್ ಅಂಕಗಳನ್ನು 2026 ಜುಲೈ 17 ರಂದು ಆಯೋಗವು ಅಧಿಕೃತ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐಎಎಸ್ ವರ್ಗಾವಣೆ

**ಬೆಂಗಳೂರು, ಜು.20:** ಹಲವು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಸೋಮವಾರ ಆದೇಶ ಹೊರಡಿಸಿದೆ. ಮುಖ್ಯಮಂತ್ರಿ ಕಚೇರಿ, ಹಣಕಾಸು ಇಲಾಖೆ, ಪ್ರವಾಸೋದ್ಯಮ ಇಲಾಖೆ ಸೇರಿ ವಿವಿಧ ಪ್ರಮುಖ ಹುದ್ದೆಗಳಿಗೆ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

⇨ 2010ರ ಬ್ಯಾಚ್‌ನ ಐಎಎಸ್ ಅಧಿಕಾರಿ ನಕುಲ್ ಎಸ್.ಎಸ್. ಅವರನ್ನು ಹಣಕಾಸು ಇಲಾಖೆಯ (ವೆಚ್ಚ) ಕಾರ್ಯದರ್ಶಿ ಹುದ್ದೆಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಿ ಮುಖ್ಯಮಂತ್ರಿಗಳ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ. ಈ ಮೂಲಕ ರಾಜೇಂದ್ರ ಚೋಳನ್ ಪಿ. ಅವರ ಹೆಚ್ಚುವರಿ ಹೊಣೆಗಾರಿಕೆಗೆ ಮುಕ್ತಿ ನೀಡಲಾಗಿದೆ.

⇨ ಡಾ. ರಾಮ್‌ಪ್ರಸಾತ್ ಮನೋಹರ್ ವಿ., ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿದ್ದು, ಅವರಿಗೆ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ.

⇨ ಅಭಿರಾಮ್ ಜಿ. ಶಂಕರ್ ಅವರಿಗೆ ಹಣಕಾಸು ಇಲಾಖೆ (ವೆಚ್ಚ) ಕಾರ್ಯದರ್ಶಿ ಹಾಗೂ ಹೆಚ್ಚುವರಿ ಕಾರ್ಯದರ್ಶಿ ಹುದ್ದೆಗಳ ಹೆಚ್ಚುವರಿ ಜವಾಬ್ದಾರಿ ವಹಿಸಲಾಗಿದೆ.

⇨ ಪಾಟೀಲ್ ಯಳಗೌಡ ಶಿವನಗೌಡ ಅವರಿಗೆ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವೃತ್ತಿಪರ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಹುದ್ದೆಗಳ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ.

⇨ ಶಿವಪ್ರಸಾದ್ ಪಿ.ಆರ್. ಅವರಿಗೆ ಪ್ರವಾಸೋದ್ಯಮ ಆಯುಕ್ತ ಹುದ್ದೆಯ ಹೆಚ್ಚುವರಿ ಜವಾಬ್ದಾರಿ ವಹಿಸಲಾಗಿದೆ.

⇨ ಶೇಖ್ ತನ್ವೀರ್ ಆಸಿಫ್ ಅವರನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಂಸ್ಥೆ ಮೈಸೂರು ನಿರ್ದೇಶಕರಾಗಿ ನೇಮಕ ಮಾಡಲಾಗಿದೆ.

⇨ ಯತೀಶ್ ಆರ್. ಅವರನ್ನು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ) ಹುದ್ದೆಯಿಂದ ವರ್ಗಾವಣೆ ಮಾಡಿ ಮುಖ್ಯಮಂತ್ರಿಗಳ ಉಪ ಕಾರ್ಯದರ್ಶಿ–1 ಆಗಿ ನೇಮಕ ಮಾಡಲಾಗಿದೆ. ಅವರಿಗೆ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಿಇಓ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆಯನ್ನೂ ಮುಂದುವರಿಸಲಾಗಿದೆ.

ಈ ವರ್ಗಾವಣೆ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರ ಅಧಿಸೂಚನೆ ಹೊರಡಿಸಿದೆ.

# ಕ್ವಿನ್‌ಸಿಟಿಯಲ್ಲಿ ಲಕ್ಸಂಬರ್ಗ್ ಸಹಭಾಗಿತ್ವಕ್ಕೆ ಆಹ್ವಾನ, ಜಪಾನ್‌ನಲ್ಲಿ ಹೂಡಿಕೆ ಆಕರ್ಷಣೆ: ಸಚಿವ ಎಂ.ಬಿ. ಪಾಟೀಲ್

### ರಾಯಭಾರಿ ಕ್ರಿಶ್ಚಿಯನ್ ಬೀವರ್ ಮತ್ತು ಕೌನ್ಸಿಲರ್ ಮ್ಯಾಕ್ಸಿಮ್ ವಿಕ್ಟರ್ ಅವರೊಂದಿಗೆ ವಿಚಾರ ವಿನಿಮಯ



**ಬೆಂಗಳೂರು, ಜು.20:** ಲಕ್ಸಂಬರ್ಗ್ ಉಪಪ್ರಧಾನಿ ಕ್ಸೇವಿಯರ್ ಬೆಟಲ್ ಸೆ.7ರಿಂದ 9ರ ನಡುವೆ ಬೆಂಗಳೂರಿಗೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಆ ದೇಶದ ಭಾರತೀಯ ರಾಯಭಾರಿ ಕ್ರಿಶ್ಚಿಯನ್ ಬೀವರ್ ಮತ್ತು ಲಕ್ಸಂಬರ್ಗ್ ಎಂಬೆಸಿಯಲ್ಲಿ ಕೌನ್ಸೆಲರ್ ಆಗಿರುವ ಮ್ಯಾಕ್ಸಿಮ್ ವಿಕ್ಟರ್ ಅವರು ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರನ್ನು ಸೋಮವಾರ ಭೇಟಿ ಮಾಡಿ, ಹೂಡಿಕೆ ಮತ್ತು ಸಹಭಾಗಿತ್ವ ಕುರಿತು ವಿಚಾರ ವಿನಿಮಯ ನಡೆಸಿದರು.

ಖನಿಜ ಭವನದಲ್ಲಿ ನಡೆದ ಈ ಭೇಟಿಯ ಬಗ್ಗೆ ಮಾತನಾಡಿದ ಸಚಿವರು, ಹೂಡಿಕೆ, ನಾವೀನ್ಯತೆ ಮತ್ತು ತಂತ್ರಜ್ಞಾನ ವಲಯಗಳಲ್ಲಿ ಲಕ್ಸಂಬರ್ಗ್ ಜತೆ ದ್ವಿಪಕ್ಷೀಯ ಬಾಂಧವ್ಯ ವೃದ್ಧಿಗೆ ಒಲವು ವ್ಯಕ್ತವಾಗಿದೆ. ಇದಕ್ಕೆ ಲಕ್ಸಂಬರ್ಗ್ ಕೂಡ ಸಂಪೂರ್ಣ ಸಹಮತ ವ್ಯಕ್ತಪಡಿಸಿದೆ. ಬೀವರ್ ಮತ್ತು ವಿಕ್ಟರ್ ಇಬ್ಬರೂ ಬೆಂಗಳೂರು ನಗರವು ಭಾರತದ ಸಿಲಿಕಾನ್ ಸಿಟಿ ಆಗಿ ಬೆಳೆದಿರುವುದನ್ನು ಮತ್ತು ಇಲ್ಲಿನ ಅತ್ಯುತ್ತಮ ಕೈಗಾರಿಕಾ ಕಾರ್ಯ ಪರಿಸರ ಹಾಗೂ ಪ್ರತಿಭಾನ್ವಿತ ಮಾನವ ಸಂಪನ್ಮೂಲವನ್ನು ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ್ದಾಗಿ ತಿಳಿಸಿದರು.

ದಾಬಸ್‌ಪೇಟೆ–ದೊಡ್ಡಬಳ್ಳಾಪುರ ನಡುವೆ ಅಭಿವೃದ್ಧಿ ಪಡಿಸುತ್ತಿರುವ ಕ್ವಿನ್ ಸಿಟಿಯಲ್ಲಿ ಇರುವ ಸದವಕಾಶಗಳ ಬಗ್ಗೆಯೂ ಲಕ್ಸಂಬರ್ಗ್ ನಿಯೋಗಕ್ಕೆ ಮನದಟ್ಟು ಮಾಡಿಕೊಡಲಾಗಿದೆ. ಇಲ್ಲಿ ಆ ದೇಶದ ವಿಶ್ವವಿದ್ಯಾಲಯಗಳು, ಕಂಪನಿಗಳು ಮತ್ತು ನಾವೀನ್ಯತಾ ಸಂಸ್ಥೆಗಳು ಈ ಯೋಜನೆಯ ಭಾಗವಾಗಿ ಸಹಭಾಗಿತ್ವ ಸ್ಥಾಪಿಸಿಕೊಳ್ಳಬೇಕು ಮತ್ತು ಹೂಡಿಕೆ ಮಾಡಬೇಕು ಎಂದು ಮುಕ್ತವಾಗಿ ಆಹ್ವಾನಿಸಲಾಗಿದೆ ಎಂದರು.

ಲಕ್ಸಂಬರ್ಗ್ ಮೂಲದ ಸೆರಾಟಿಝಿಟ್ ಕಂಪನಿ ಈಗಾಗಲೇ ನಮ್ಮಲ್ಲಿ ಕೈಗಾರಿಕಾ ಬಳಕೆಗೆ ಬೇಕಾಗುವ ಆಧುನಿಕ ಸಾಧನಗಳನ್ನು (ಅಡ್ವಾನ್ಸ್ಡ್ ಕಟಿಂಗ್ ಮೆಟೀರಿಯಲ್ಸ್) ತಯಾರಿಸುತ್ತಿದೆ. ಮಿಕ್ಕಂತೆ ಉಕ್ಕು, ಆಟೋಮೋಟಿವ್, ಎಂಜಿನಿಯರಿಂಗ್, ಶುದ್ಧ ಇಂಧನ, ಕೈಗಾರಿಕಾ ಸಾಧನಗಳು ಮತ್ತು ಬಾಹ್ಯಾಕಾಶ ತಂತ್ರಜ್ಞಾನ ವಲಯಗಳಲ್ಲಿ ಲಕ್ಸಂಬರ್ಗ್ ಪರಿಣತಿ ಹೊಂದಿದೆ ಎನ್ನುವುದನ್ನು ಅವರು ನಮ್ಮ ಗಮನಕ್ಕೆ ತಂದಿದ್ದಾರೆ. ಬೆಂಗಳೂರು ಮೂಲದ ಇನ್ಫೋಸಿಸ್ ಮತ್ತು ವಿಪ್ರೋ ಕಂಪನಿಗಳು ಲಕ್ಸಂಬರ್ಗಿನಲ್ಲಿ ಬಂಡವಾಳ ಹೂಡಿದ್ದು, ಕ್ರಿಯಾಶೀಲವಾಗಿವೆ ಎಂದು ಪಾಟೀಲ ವಿವರಿಸಿದರು.

ಜಪಾನಿನ ದ್ವಿತೀಯ ಸ್ತರದ ಸೆಮಿಕಂಡಕ್ಟರ್ ಕಂಪನಿಗಳು ಕರ್ನಾಟಕದಲ್ಲಿ ಹೆಚ್ಚಿನ ಹೂಡಿಕೆ ಮಾಡಲು ರಾಜ್ಯದ ಕೈಗಾರಿಕಾ ಕಾರ್ಯಪರಿಸರ ಮತ್ತು ನೀತಿಗಳು ಪ್ರಶಸ್ತವಾಗಿವೆ. ಇದನ್ನು ಕಾರ್ಯರೂಪಕ್ಕೆ ತರುವ ಉದ್ದೇಶದಿಂದ ಆ ದೇಶದ ಫುಕುವೋಕಾದಲ್ಲಿ ಸದ್ಯದಲ್ಲೇ ಹೂಡಿಕೆ ಆಕರ್ಷಣೆ ಕಾರ್ಯಕ್ರಮ ನಡೆಸಲಾಗುವುದು ಎಂದೂ ಎಂ.ಬಿ. ಪಾಟೀಲ ಹೇಳಿದರು.

ಫುಕುವೋಕಾದಲ್ಲಿರುವ ಭಾರತೀಯ ಕಾನ್ಸುಲ್ ಜನರಲ್ ಸಿ.ರಾಮಕುಮಾರ್ ಸೋಮವಾರ ಇಲ್ಲಿ ತಮ್ಮನ್ನು ಭೇಟಿಯಾದ ನಂತರ ಅವರು ಈ ವಿಚಾರ ತಿಳಿಸಿದ್ದಾರೆ.

ರಾಜ್ಯದಲ್ಲಿರುವ ಅತ್ಯುತ್ತಮ ಸಂಶೋಧನೆ ಮತ್ತು ಅಭಿವೃದ್ಧಿ ವ್ಯವಸ್ಥೆ (ಆರ್ & ಡಿ) ಮತ್ತು ನೂರಾರು ಕಂಪನಿಗಳ ಜಿಸಿಸಿ ಕೇಂದ್ರಗಳ ಬಗ್ಗೆ ಜಪಾನಿನ ಉದ್ಯಮಿಗಳು ಸಾದ್ಯಂತವಾಗಿ ತಿಳಿದುಕೊಂಡಿದ್ದಾರೆ. ಹೀಗಾಗಿ ಅವರೆಲ್ಲ ನಮ್ಮಲ್ಲಿ ಸೆಮಿಕಂಡಕ್ಟರ್ ವಲಯದಲ್ಲಿ ಹೂಡಿಕೆ ಮಾಡಲು ಬಯಸುತ್ತಿದ್ದಾರೆ ಎಂದು ಕಾನ್ಸುಲ್ ಜನರಲ್ ತಿಳಿಸಿದ್ದಾರೆ. ನಾವು ಕೂಡ ಈ ಅವಕಾಶವನ್ನು ಬಳಸಿಕೊಳ್ಳಲು ಉತ್ಸುಕರಾಗಿದ್ದೇವೆ ಎಂದು ಅವರು ನುಡಿದಿದ್ದಾರೆ.

ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿರುವ ಜಾಗತಿಕ ಗುಣಮಟ್ಟದ ಶಿಕ್ಷಣ ಸಂಸ್ಥೆಗಳು ನಮ್ಮ ಕೈಗಾರಿಕಾ ಬೆಳವಣಿಗೆ ಮತ್ತು ಪ್ರತಿಭಾವಂತ ಮಾನವ ಸಂಪನ್ಮೂಲದ ಸೃಷ್ಟಿಯ ಹಿಂದಿವೆ. ಆದ್ದರಿಂದ ಫುಕುವೋಕಾ ಸೇರಿದಂತೆ ಮಿಕ್ಕ ಭಾಗಗಳ ಉದ್ಯಮಿಗಳು ಕೂಡ ರಾಜ್ಯದಲ್ಲಿ ಕೈಗಾರಿಕಾ ಸಹಭಾಗಿತ್ವ, ತಾಂತ್ರಿಕ ಸಹಯೋಗ ಮತ್ತು ಹೂಡಿಕೆ ಅವಕಾಶಗಳಿಗೆ ಕಾತರದಿಂದಿದ್ದಾರೆ ಎನ್ನುವುದು ದೃಢವಾಗಿದೆ. ಇದು ನನಸಾದರೆ ರಾಜ್ಯದ ಆರ್ಥಿಕ ಬೆಳವಣಿಗೆಗೆ ದೊಡ್ಡ ಶಕ್ತಿ ಬರಲಿದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

# ಗಣಿ ಇಲಾಖೆಗೆ ಸಿಎಂ ಮೇಜರ್ ಸರ್ಜರಿ: ಒಂದೇ ಸ್ಥಳದಲ್ಲಿ ಠಿಕಾಣಿ ಹೂಡಿದ್ದ ಶೇ.80ರಷ್ಟು ಸಿಬ್ಬಂದಿ ವರ್ಗಾವಣೆ

**ಬೆಂಗಳೂರು, ಜು.20:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಗಣಿ ಇಲಾಖೆಗೆ ಮೇಜರ್ ಸರ್ಜರಿ ಮಾಡಿದ್ದು, ಹಲವು ವರ್ಷಗಳಿಂದ ಒಂದೇ ಸ್ಥಳದಲ್ಲಿ ಠಿಕಾಣಿ ಹೂಡಿದ್ದ ಇಲಾಖೆಯ ಶೇ.80ರಷ್ಟು ಸಿಬ್ಬಂದಿಯನ್ನು ವರ್ಗಾವಣೆ ಮಾಡಿ ಆದೇಶಿಸಿದ್ದಾರೆ. ಗಣಿ ಇಲಾಖೆಯಲ್ಲಿ ಒಂದೇ ಬಾರಿಗೆ ಬರೋಬ್ಬರಿ 160 ಅಧಿಕಾರಿಗಳ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದ್ದು, 131 ಭೂವಿಜ್ಞಾನಿಗಳು, 23 ಹಿರಿಯ ಭೂವಿಜ್ಞಾನಿಗಳು, 6 ಉಪನಿರ್ದೇಶಕರನ್ನು ವರ್ಗಾವಣೆ ಮಾಡಲಾಗಿದೆ. ದಶಕಗಳ ಕಾಲ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಮತ್ತು ಸ್ವಂತ ಹಾಗೂ ನೆರೆಯ ಜಿಲ್ಲೆಗಳಲ್ಲಿ ಬೀಡು ಬಿಟ್ಟಿದ್ದ ಅಧಿಕಾರಿಗಳನ್ನು ರಾಜ್ಯ ಸರ್ಕಾರ ಇದೀಗ ಎತ್ತಂಗಡಿ ಮಾಡಿದೆ.

ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹೆಚ್ಚಿನ ಉಪ ನಿರ್ದೇಶಕರು ತಮ್ಮ ಸ್ವಂತ ಜಿಲ್ಲೆಗಳಲ್ಲಿ ಅಥವಾ ನೆರೆಯ ಜಿಲ್ಲೆಗಳಲ್ಲಿಯೇ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಒಂದೇ ಸ್ಥಳದಲ್ಲಿ ದೀರ್ಘಕಾಲದಿಂದ ಮುಂದುವರಿದಿದ್ದಾರೆ ಅಥವಾ ಆಡಳಿತಾತ್ಮಕ ಹಾಗೂ ಸಾರ್ವಜನಿಕ ದೂರುಗಳನ್ನು ಎದುರಿಸುತ್ತಿದ್ದಾರೆ. ಇಂತಹ ದೀರ್ಘಕಾಲದ ಕಾರ್ಯಾವಧಿಯು ಸ್ವಹಿತಾಸಕ್ತಿಗಳಿಗೆ ಎಡೆಮಾಡಿಕೊಡುತ್ತದೆ ಹಾಗೂ ಇಲಾಖೆಯ ಘನತೆಗೆ ಧಕ್ಕೆ ತರುವ ಕಾರಣ ಸ್ಥಳೀಯ ಮಟ್ಟದ ಏಕಸ್ವಾಮ್ಯವನ್ನು ಮುರಿಯಲು ಮತ್ತು ಸಾಂಖ್ಯಿಕ ಅಕ್ರಮಗಳನ್ನು ತಡೆಗಟ್ಟಲು, ಇಲಾಖೆಯ ಪ್ರಮುಖ ಆದಾಯ ಸಂಗ್ರಹಣಾ ಕಾರ್ಯಗಳಿಗೆ ಯಾವುದೇ



ಅಡಚಣೆಯಾಗದಂತೆ, ವಸ್ತುನಿಷ್ಠತೆ, ಪಾರದರ್ಶಕತೆ ಮತ್ತು ಸಾರ್ವಜನಿಕ ಹೊಣೆಗಾರಿಕೆಯನ್ನು ಮರುಸ್ಥಾಪಿಸುವ ನಿಟ್ಟಿನಲ್ಲಿಈ ಕೂಡಲೇ ಜಾರಿಗೆ ಬರುವಂತೆ 160 ಅಧಿಕಾರಿಗಳನ್ನು ವರ್ಗಾವಣೆ ಮಾಡಿರೋದಾಗಿ ಆದೇಶದಲ್ಲಿ ತಿಳಿಸಲಾಗಿದೆ. ವರ್ಗಾಯಿಸಿದ ಹುದ್ದೆಗೆ ತಕ್ಷಣ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕೇಂದ್ರ ಕಚೇರಿಗೆ ಮಾಹಿತಿಯನ್ನು ನೀಡುವಂತೆಯೂ ಆದೇಶದಲ್ಲಿ ಸೂಚಿಸಲಾಗಿದೆ. ಅನಧಿಕೃತ ಗಣಿಗಾರಿಕೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಸೂಚನೆ ಮೇರೆಗೆ ಗಣಿ ಇಲಾಖೆಯಲ್ಲಿ ಆಡಳಿತಾತ್ಮಕ ಬದಲಾವಣೆ ಮಾಡಲಾಗಿದೆ. ಜುಲೈ 1ರಂದು ನಡೆದಿದ್ದ ಗಣಿ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಇಲಾಖಾ ಕಾರ್ಯದರ್ಶಿ ರೋಹಿಣಿ ಸಿಂಧೂರಿ ಅವರಿಂದ ಈ ವಿಷಯ ಪ್ರಸ್ತಾಪವಾಗಿತ್ತು. ಈ ಬಗ್ಗೆ ಕಡತ ಮಂಡಿಸುವಂತೆ ಸಭೆಯಲ್ಲೇ ಕಾರ್ಯದರ್ಶಿ ರೋಹಿಣಿ ಸಿಂಧೂರಿ ಅವರಿಗೆ ಸಿಎಂ ಸೂಚನೆ ನೀಡಿದ್ದರು.



ಪುತ್ರ ಎಚ್.ಡಿ.ಕುಮಾರಸ್ವಾಮಿ ಅವರಿಂದ ತಾಯಿಗೆ ಅಂತಿಮ ಚುಂಬನ. ಚೆನ್ನಮ್ಮ ದೇವೇಗೌಡರ ಅಂತ್ಯಕ್ರಿಯೆಯು ಸೋಮವಾರ ಅವರ ಸ್ವಗ್ರಾಮ ಮಾವಿನಕೆರೆಯಲ್ಲಿ ಸಂಪೂರ್ಣ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು.

# ಆ.15ರಿಂದ ಸೆ.15ರವರೆಗೆ ಬೆಂಗಳೂರು ಹಸಿರೂರು ಅಭಿಯಾನ: ಸಚಿವ ಕೃಷ್ಣ ಬೈರೇಗೌಡ

**ಬೆಂಗಳೂರು, ಜು.20:** ಗಿಡ ನೆಡುವ ಕಾರ್ಯಕ್ರಮ ಕೇವಲ ಪೇಪರ್ ಕಾರ್ಯಕ್ರಮವಾಗಬಾರದು. ನಿಜವಾಗಿಯೂ ಗಿಡಗಳನ್ನು ನೆಟ್ಟು, ಅವುಗಳನ್ನು ಸಂರಕ್ಷಿಸಿ ಬೆಳೆಸುವ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕೆಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಲ್ಲಿ ಜಿಬಿಎ ಅರಣ್ಯ ವಿಭಾಗದಿಂದ ಸಸಿ ನೆಡುವ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ಬಾರಿ ಪಾಲಿಕೆ ವತಿಯಿಂದ 64 ಸಾವಿರ ಸಸಿಗಳನ್ನು ನೆಡುವ ಹಾಗೂ 40 ಸಾವಿರ ಸಸಿಗಳನ್ನು ನಾಗರಿಕರಿಗೆ ವಿತರಿಸುವ ಯೋಜನೆ ರೂಪಿಸಲಾಗಿದ್ದು, ಅದಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಂಡು ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ನಗರದಲ್ಲಿ ಈ ಹಿಂದೆ ನೆಟ್ಟ ಗಿಡಗಳ ಸಮರ್ಪಕ ದಾಖಲೆ ಹಾಗೂ ಮೇಲ್ವಿಚಾರಣೆ ಕಂಡುಬರುತ್ತಿಲ್ಲ. ಮುಂದಿನ ದಿನಗಳಲ್ಲಿ ಇಂತಹ ಪರಿಸ್ಥಿತಿ ಮರುಕಳಿಸದಂತೆ ಕ್ರಮವಹಿಸಬೇಕು. ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು, ಅವುಗಳನ್ನು ಸಮರ್ಪಕವಾಗಿ ಪೋಷಿಸಿದರೆ ತಾಪಮಾನ ಹಾಗೂ ವಾಯುಮಾಲಿನ್ಯವನ್ನು ಕಡಿಮೆ ಮಾಡುವುದರ ಜೊತೆಗೆ ನಗರದ ಸೌಂದರ್ಯ ಮತ್ತು ಪರಿಸರವೂ ವೃದ್ಧಿಯಾಗಲಿದೆ. ಈ ನಿಟ್ಟಿನಲ್ಲಿ ಪಬ್ಲಿಕ್-ಪ್ರೈವೇಟ್ ಪ್ಲಾಂಟಿಂಗ್ ಪ್ರೋಗ್ರಾಂ(ಪಿಪಿಪಿಪಿ) ಮೂಲಕ ಸಾರ್ವಜನಿಕರ ಸಹಭಾಗಿತ್ವದಲ್ಲಿ ಸಸಿ ನೆಡುವ ಅಭಿಯಾನ ಕೈಗೊಳ್ಳಲು ಸೂಚನೆ ನೀಡಿದ್ದೇನೆ ಎಂದು ಹೇಳಿದರು.

ಬೆಂಗಳೂರಿನ ಉಳಿವಿಗಾಗಿ ಗಿಡ ನೆಡುವ ಕಾರ್ಯಕ್ರಮ ಸಹಾಯಕವಾಗಲಿದೆ. ನಗರದ ಭವಿಷ್ಯಕ್ಕಾಗಿ ಇದು ಅತ್ಯಂತ ಅಗತ್ಯ ಕಾರ್ಯಕ್ರಮವಾಗಿದೆ. ಗಿಡ ನೆಡುವ ಕಾರ್ಯಕ್ರಮ ಕೇವಲ ದಾಖಲೆಗಳಿಗೆ ಸೀಮಿತವಾಗದೆ, ನೈಜವಾಗಿ ಕಾರ್ಯರೂಪಕ್ಕೆ ಬರಬೇಕು. ಈ ಬಾರಿ ನಗರದಲ್ಲಿ ಟೊಳ್ಳಾಗಿರುವ ಅಥವಾ ಗುಣಮಟ್ಟವಿಲ್ಲದ ಸಸಿಗಳನ್ನು ನೆಡುವುದಿಲ್ಲ. ಮಹಾಗನಿ, ಟಬೆಬಿಯಾ ರೋಸಿಯಾ, ಹೊಂಗೆ, ಬೇವು, ನೇರಳೆ ಸೇರಿದಂತೆ ಗುಣಮಟ್ಟದ ಮರಗಳನ್ನಷ್ಟೇ ನೆಡಲಾಗುವುದು ಎಂದು ತಿಳಿಸಿದರು. ಪ್ರಸಕ್ತ ಸಾಲಿನಲ್ಲಿ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಬಡಾವಣೆಗಳಲ್ಲಿ ಸಸಿಗಳನ್ನು



ನೆಡುವುದಕ್ಕೆ ಮೊದಲ ಆದ್ಯತೆ ನೀಡಲಾಗುವುದು. ಬಡಾವಣೆಗಳಲ್ಲಿ ಅಗತ್ಯವಿರುವಷ್ಟು ಸಸಿಗಳನ್ನು ನೆಟ್ಟ ನಂತರ ಉಳಿದ ಸಸಿಗಳನ್ನು ಸಾರ್ವಜನಿಕ ಸ್ಥಳಗಳು, ರಸ್ತೆ ಬದಿಗಳು, ಕೆರೆಗಳ ಸುತ್ತಮುತ್ತ ಹಾಗೂ ಉದ್ಯಾನವನಗಳಲ್ಲಿ ನೆಡಲಾಗುವುದು. ನಿಯಮಾನುಸಾರ ಗುಂಡಿ ತೋಡಿ, 6 ಅಡಿ ಎತ್ತರದ ಸಸಿಗಳನ್ನು 12 ಅಡಿ ಅಂತರದಲ್ಲಿ ನೆಡಬೇಕು. ನಾಗರಿಕರ ಸಹಭಾಗಿತ್ವದಲ್ಲಿ ಸಸಿಗಳನ್ನು ನೆಟ್ಟರೆ ಅವು ಬದುಕಿ ಬೆಳೆದು ಪರಿಸರದ ಅಭಿವೃದ್ಧಿಗೆ ನೆರವಾಗುತ್ತವೆ ಎಂದು ಹೇಳಿದರು.

ಸಭೆಯಲ್ಲಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವಿಶೇಷ ಆಯುಕ್ತ ಸುಷ್ಮಾ ಗೋಡಬೋಲೆ, ಆಯುಕ್ತರಾದ ಪೊಮ್ಮಲ ಸುನೀಲ್‌ಕುಮಾರ್ ಹಾಗೂ ಜಿ. ಜಗದೀಶ್, ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ಸಿಇಒ ಕರೀಗೌಡ, ಅಪರ ಆಯುಕ್ತ ಲೋಖಂಡೆ ಸ್ನೇಹಲ್ ಸುಧಾಕರ್, ನವೀನ್ ಕುಮಾರ್ ರಾಜು, ಉಪ ಅರಣ್ಯ ಸಂರಕ್ಷಣಾಧಿಕಾರಿ ಸುದರ್ಶನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**9.64 ಕೋಟಿ ರೂ. ವೆಚ್ಚದಲ್ಲಿ ಸಸಿ ನೆಡುವ ಯೋಜನೆ:** ಪ್ರಸಕ್ತ ಸಾಲಿನಲ್ಲಿ 64,000 ಸಸಿಗಳನ್ನು ನೆಡುವ ಗುರಿ ಹೊಂದಲಾಗಿದ್ದು, ಸಸಿ ನೆಟ್ಟ ನಂತರ ಮೂರು ವರ್ಷಗಳ ನಿರ್ವಹಣೆಯೂ ಸೇರಿದಂತೆ ಐದು ನಗರ ಪಾಲಿಕೆಗಳ ಆಯವ್ಯಯದಲ್ಲಿ 9.64 ಕೋಟಿ ರೂ. ಮೀಸಲಿಡಲಾಗಿದೆ. ಸಸಿಗಳನ್ನು ಯಶಸ್ವಿಯಾಗಿ ನೆಟ್ಟು ನಿರ್ವಹಿಸುವ ಆಧಾರದ ಮೇಲೆ ಹಣವನ್ನು ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

**ಆನ್‌ಲೈನ್ ಮೂಲಕ ಮನವಿ ಸಲ್ಲಿಸಿ:** ನಗರದಲ್ಲಿರುವ ಬಡಾವಣೆಗಳ ನಿವಾಸಿಗಳು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಹಾಗೂ ನಾಗರೀಕರು ತಮ್ಮ ಬಡಾವಣೆಗಳಲ್ಲಿ ಕನಿಷ್ಠ 30 ಸಸಿಗಳನ್ನು ನೆಡಲು ಅವಕಾಶವಿದ್ದಲ್ಲಿ, ಆಗಸ್ಟ್ 10 ರೊಳಗಾಗಿ ಪಾಲಿಕೆಯ ವೆಬ್‌ಸೈಟ್ https://gbatreeplantation.com/ ಹಾಗೂ ಇ-ಮೇಲ್ dcfgba26@gmail.com ಮೂಲಕ ಮನವಿ ಸಲ್ಲಿಸಬಹುದು. ಮನವಿಗಳ ಆಧಾರದ ಮೇಲೆ ಅರಣ್ಯಾಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಸಸಿ ನೆಡಲು ಅವಕಾಶವಿದ್ದಲ್ಲಿ ಪಾಲಿಕೆಯಿಂದಲೇ ಸಸಿಗಳನ್ನು ನೆಡಲಾಗುವುದು.

**ಟ್ರ್ಯಾಕಿಂಗ್ ವ್ಯವಸ್ಥೆ ಲಭ್ಯ** ಪ್ರಸಕ್ತ ಸಾಲಿನಲ್ಲಿ ನೆಡಲಾಗುವ ಎಲ್ಲಾ ಸಸಿಗಳಿಗೂ ಟ್ರ್ಯಾಕಿಂಗ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ನಗರದಲ್ಲಿ ಎಲ್ಲೆಲ್ಲಿ ಹಾಗೂ ಎಷ್ಟು ಸಸಿಗಳನ್ನು ನೆಡಲಾಗಿದೆ ಎಂಬ ಮಾಹಿತಿಯು ಜಿಯೋ-ಲೊಕೇಷನ್ ಸಹಿತ ಪಾಲಿಕೆಯ ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ನಾಗರಿಕರು ಕೂಡ ಅದನ್ನು ವೀಕ್ಷಿಸಬಹುದು.

**ಒಂದು ಮರ ಕಡಿತಕ್ಕೆ 10 ಸಸಿಗಳನ್ನು ನೆಡಲಾಗುವುದು:** ನಗರದಲ್ಲಿ ಪಾಲಿಕೆ, ಮೆಟ್ರೋ ಸೇರಿದಂತೆ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಸಂದರ್ಭದಲ್ಲಿ ಮರಗಳನ್ನು ಕಡಿತಗೊಳಿಸುವ ಮೊದಲು, ಒಂದು ಮರಕ್ಕೆ 10 ಸಸಿಗಳನ್ನು ನೆಡುವ ವೆಚ್ಚವನ್ನು ಅರಣ್ಯ ವಿಭಾಗಕ್ಕೆ ಪಾವತಿಸಬೇಕು. ಈ ಸಸಿಗಳನ್ನೂ ಪ್ರಸಕ್ತ ಸಾಲಿನ ಗುರಿಯಲ್ಲಿ ಸೇರಿಸಲಾಗಿದೆ ಎಂದು ಹೇಳಿದರು.

# ಕೋವಿಡ್ ಅತಂಕ ಬೇಡ: ಸಚಿವ ಯು.ಟಿ.ಖಾದರ್

**ಬೆಂಗಳೂರು, ಜು.20:** ಕೋವಿಡ್ ಕುರಿತು ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ. ಮುನ್ನೆಚ್ಚರಿಕಾ ಕ್ರಮವಾಗಿ ರಾಜ್ಯದ ಗಡಿ ಭಾಗಗಳಲ್ಲಿ ತೀವ್ರ ನಿಗಾ ವಹಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಟೆಸ್ಟಿಂಗ್ ನಡೆಸುತ್ತಿರುವುದರಿಂದ ಪ್ರಕರಣಗಳ ಸಂಖ್ಯೆ ಕೊಂಚ ಹೆಚ್ಚಾಗಿ ಕಾಣಿಸುತ್ತಿದೆ. ಆದರೆ, ಸೋಂಕಿತರೆಲ್ಲರೂ ಗುಣಮುಖರಾಗುತ್ತಿದ್ದು, ಯಾವುದೇ ಸಾವಿನ ಬಗ್ಗೆ ವರದಿಯಾಗಿಲ್ಲ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಆರೋಗ್ಯ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಸಭೆಯಲ್ಲಿ ಮೊದಲ ಬಾರಿಗೆ ಎಲ್ಲಾ ಜಿಲ್ಲೆಗಳಿಗೆ ತ್ವರಿತ ಮಾಹಿತಿ ತಲುಪಿಸುವ ಉದ್ದೇಶದಿಂದ ಹೆಲ್ತ್ ಎಮರ್ಜೆನ್ಸಿ ಆಪರೇಷನ್ ಸಿಸ್ಟಮ್ ಜಾರಿಗೆ ತರಲಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಭೆಯ ಪ್ರಮುಖ ನಿರ್ಧಾರಗಳು ಹಾಗೂ ರಾಜ್ಯದ ಸದ್ಯದ ಆರೋಗ್ಯ ಸ್ಥಿತಿಗತಿಯ ಸಂಪೂರ್ಣ ವಿವರಗಳನ್ನು ಹಂಚಿಕೊಂಡರು. ಆಫ್ರಿಕಾ ರಾಷ್ಟ್ರಗಳಲ್ಲಿ ಎಬೋಲಾ ಭೀತಿ ಹಿನ್ನೆಲೆಯಲ್ಲಿ ರಾಜ್ಯದಲ್ಲೂ ಕಟ್ಟೆಚ್ಚರ ವಹಿಸಲಾಗಿದೆ. ವಿಶೇಷವಾಗಿ ಕಾಂಗೋ, ಉಗಾಂಡ ಹಾಗೂ ಆಫ್ರಿಕಾದ ಇತರೆ ದೇಶಗಳಿಂದ ಬರುವ ಪ್ರಯಾಣಿಕರನ್ನು ವಿಮಾನ ನಿಲ್ದಾಣದಲ್ಲೇ



ಕಡ್ಡಾಯವಾಗಿ ಆರೋಗ್ಯ ತಪಾಸಣೆಗೆ ಒಳಪಡಿಸಲು ಆರೋಗ್ಯ ಇಲಾಖೆಯಿಂದ ಖಡಕ್ ಆದೇಶ ಹೊರಡಿಸಲಾಗಿದೆ. ಸಾಂಕ್ರಾಮಿಕ ರೋಗಗಳನ್ನು ಸ್ಥಳೀಯ ಮಟ್ಟದಲ್ಲೇ ಪರಿಣಾಮಕಾರಿಯಾಗಿ ತಡೆಗಟ್ಟಲು ಪ್ರತಿಯೊಂದು ಕ್ಷೇತ್ರದ ಜನಪ್ರತಿನಿಧಿಗಳನ್ನು ಒಳಗೊಂಡ ಪ್ರತ್ಯೇಕ ಶಾಸಕರ ಸಮಿತಿ ರಚಿಸಲು ನಿರ್ಧರಿಸಲಾಗಿದೆ. ಸ್ಥಳೀಯ ಶಾಸಕರ ನೇತೃತ್ವದ ಈ ಸಮಿತಿಯು ಆರೋಗ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಕೆಲಸ ಮಾಡಲಿದೆ.

"ಪ್ರತಿ ಸೀಸನ್ನಲ್ಲೂ ಸಾಂಕ್ರಾಮಿಕ ರೋಗಗಳು ಬರುವುದು ಸಹಜ, ಅದನ್ನು ತಡೆಯಲು ಸಾಧ್ಯವಿಲ್ಲ. ಆದರೆ ನಿಯಂತ್ರಿಸಬಹುದು. ರೋಗನಿರೋಧಕ ಶಕ್ತಿ (ಇಮ್ಯುನಿಟಿ) ಕಡಿಮೆ ಇರುವವರಿಗೆ ಜ್ವರ ಬೇಗ ಬರುತ್ತದೆ. ಪ್ರಕೃತಿ ನೀಡಿರುವ ಗಾಳಿ ಮತ್ತು ನೀರು ನಮಗೆ ಇರುವ ಎರಡು ಉಚಿತ ಔಷಧಗಳು. ಸಾರ್ವಜನಿಕರು ಬಿಸಿನೀರು ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು ಯು.ಟಿ. ಖಾದರ್ ಹೇಳಿದರು.

ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಸಾಂಕ್ರಾಮಿಕ ರೋಗಗಳ ಪ್ರಮಾಣ ಗಣನೀಯವಾಗಿ ಇಳಿಕೆಯಾಗಿದೆ. ಮಲೇರಿಯಾ ಪ್ರಕರಣಗಳಲ್ಲಿ ಶೇ. 70 ರಷ್ಟು ಹಾಗೂ ಡೆಂಘೀ ಪ್ರಕರಣಗಳಲ್ಲಿ ಶೇ. 33 ರಷ್ಟು ಇಳಿಕೆ ಕಂಡುಬಂದಿದೆ. ಚಿಕನ್ ಗುನ್ಯಾ ಹರಡದಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಆರೋಗ್ಯ ಇಲಾಖೆ ಸಿಬ್ಬಂದಿ ಪ್ರತಿ ಮನೆಗೆ ಭೇಟಿ ನೀಡಿ ಲಾರ್ವಾ ಸ್ಯಾಂಪಲ್ ಸಂಗ್ರಹಿಸುತ್ತಿದ್ದಾರೆ. ಇಲಾಖೆಯಲ್ಲಿ ಖಾಲಿ ಇರುವ ಲ್ಯಾಬ್ ಟೆಕ್ನಿಷಿಯನ್ ಹಾಗೂ ಫಾರ್ಮಸಿಸ್ಟ್‌ಗಳ ತುರ್ತು ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದೆ.

ಸದ್ಯ ರಾಜ್ಯದ ಬಹುತೇಕ ಎಲ್ಲಾ ಜಿಲ್ಲೆಗಳಲ್ಲೂ ಅಗತ್ಯ ಸಿಬ್ಬಂದಿ ಹಾಗೂ ಔಷಧಗಳ ದಾಸ್ತಾನು ಲಭ್ಯವಿದ್ದು, ಕೊರತೆ ಇರುವ ಕಡೆ ತಕ್ಷಣ ಒದಗಿಸಲಾಗುವುದು.

ಸಾಂಕ್ರಾಮಿಕ ರೋಗಗಳ ಚಿಕಿತ್ಸೆ ಹೆಸರಿನಲ್ಲಿ ಸಾರ್ವಜನಿಕರಿಂದ ಖಾಸಗಿ ಆಸ್ಪತ್ರೆಗಳು ದುಬಾರಿ ಬಿಲ್ ವಸೂಲಿ ಮಾಡುವಂತಿಲ್ಲ. ಇದರ ಮೇಲೆ ನಿಗಾ ಇಡಲು ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ. ಖಾಸಗಿ ಆಸ್ಪತ್ರೆಗೆ ದಾಖಲಾಗುವ ರೋಗಿಗಳ ಸಂಪೂರ್ಣ ಮಾಹಿತಿಯನ್ನು ಕಡ್ಡಾಯವಾಗಿ ಇಲಾಖೆಗೆ ನೀಡಬೇಕು. ಇದೇ ವೇಳೆ, ಖಾಸಗಿ ಜಾಗಗಳಲ್ಲಿ ಸೊಳ್ಳೆ ಉತ್ಪತ್ತಿಯಾಗುವ ವಾತಾವರಣ ನಿರ್ಮಿಸಿದರೆ ಅಂತಹ ಜಾಗದ ಮಾಲೀಕರಿಗೆ ದಂಡ ವಿಧಿಸಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದರು.

### 'ಲಾಲ್‌ಬಾಗ್ ಮಾರಾಟಕ್ಕಿದೆ' ಸಂದೇಶವಿರುವ ಕರಪತ್ರ ವಿತರಿಸಿದ ತೇಜಸ್ವಿ ಸೂರ್ಯ ಜಾಗೃತಿ

# ಲಾಲ್‌ಬಾಗ್ ರಕ್ಷಣೆಗೆ ಬೃಹತ್ ಜನಾಂದೋಲನಕ್ಕೆ ಕರೆ

**ಬೆಂಗಳೂರು, ಜು.20:** ಐತಿಹಾಸಿಕ ಲಾಲ್‌ಬಾಗ್ ಉದ್ಯಾನವನದ 5 ಎಕರೆ ಜಾಗವನ್ನು ಉತ್ತರ-ದಕ್ಷಿಣ ಸುರಂಗ ರಸ್ತೆ ಯೋಜನೆಗೆ ಬಳಸಿಕೊಳ್ಳುವ ರಾಜ್ಯ ಸರ್ಕಾರದ ಪ್ರಸ್ತಾವನೆಗೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದ್ದು, ಇದೀಗ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ವಿಭಿನ್ನವಾಗಿ ಪ್ರತಿಭಟಿಸಿದ್ದಾರೆ.

ಹೆಬ್ಬಾಳ ಮತ್ತು ಸಿಲ್ಕ್ ಬೋರ್ಡ್ ಸಂಪರ್ಕಿಸುವ ಈ ಮಹತ್ವದ ಯೋಜನೆಗಾಗಿ ಉದ್ಯಾನವನದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿರುವುದನ್ನು ವಿರೋಧಿಸಿ ತೇಜಸ್ವಿ ಸೂರ್ಯ ಅವರು ಲಾಲ್‌ಬಾಗ್‌ಗೆ ಭೇಟಿ ನೀಡಿ ಸಾರ್ವಜನಿಕರು ಹಾಗೂ ವಾಸಿಗಳಿಗೆ 'ಲಾಲ್‌ಬಾಗ್ ಮಾರಾಟಕ್ಕಿದೆ' ಎಂಬ ಸಂದೇಶವಿರುವ ಕರಪತ್ರಗಳನ್ನು ಹಂಚುವ ಮೂಲಕ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದರು, ಹೆಮ್ಮೆಯ ಲಾಲ್‌ಬಾಗ್ ನಗರದ ಅತಿ ದೊಡ್ಡ ಹಸಿರು ವಲಯವಾಗಿದ್ದು, ಅಂತರ್ಜಲ ಮರುಪೂರಣ ಹಾಗೂ ಲಾಲ್‌ಬಾಗ್ ಕೆರೆಯ ಪರಿಸರ ವ್ಯವಸ್ಥೆಯನ್ನು ರಕ್ಷಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಸರ್ಕಾರದ ಈ ಪ್ರಸ್ತಾವನೆ ಸಾರ್ವಜನಿಕರಲ್ಲಿ ತೀವ್ರ ಆತಂಕ ಮೂಡಿಸಿದ್ದು, ಉದ್ಯಾನವನವನ್ನು ಉಳಿಸಿಕೊಳ್ಳಲು ಇದೊಂದು ಬೃಹತ್ ಜನ ಆಂದೋಲನವಾಗಿ ರೂಪಗೊಳ್ಳಬೇಕಿದೆ




ಎಂದು ಕರೆ ನೀಡಿದರು. ಯಾವುದೇ ಕಾರಣಕ್ಕೂ ಲಾಲ್‌ಬಾಗ್ ಆವರಣದಲ್ಲಿ ಈ ಯೋಜನೆ ಜಾರಿಯಾಗಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸ್ವಾಧೀನಪಡಿಸಿಕೊಂಡ ಜಾಗದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣಕ್ಕೆ ಅನುಮತಿ ನೀಡಿರುವ ಆರೋಪ ರಾಜ್ಯ ಸರ್ಕಾರವು ಈ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್‌ಗೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ, ಲಾಲ್‌ಬಾಗ್‌ನ ಒಟ್ಟು 97 ಹೆಕ್ಟೇರ್ ಪ್ರದೇಶದಲ್ಲಿ ತಾತ್ಕಾಲಿಕ ಕಾಮಗಾರಿ ಸೇರಿ ಕೇವಲ 2.37 ಹೆಕ್ಟೇರ್ ಜಾಗವನ್ನು ಮಾತ್ರ ಬಳಸಿಕೊಳ್ಳಲಾಗುವುದು ಮತ್ತು ಶಾಶ್ವತವಾಗಿ 1.92 ಹೆಕ್ಟೇರ್ (ಉದ್ಯಾನವನದ ಸುಮಾರು ಶೇ. 1.9ರಷ್ಟು) ಜಾಗ ಮಾತ್ರ ಅಗತ್ಯವಿದ್ದು, ಕೆಲಸ ಮುಗಿದ ನಂತರ ಪರಿಸ್ಥಿತಿಯನ್ನು ಯಥಾಸ್ಥಿತಿಗೆ ತರಲಾಗುವುದು ಎಂದು ತಿಳಿಸಿದೆ. ಆದರೆ ಸರ್ಕಾರದ ಈ ವಾದವನ್ನು ತಳ್ಳಿಹಾಕಿರುವ ತೇಜಸ್ವಿ ಸೂರ್ಯ, ಯೋಜನೆಯ ವಿಸ್ತೃತ ವರದಿ ಪ್ರಕಾರ ಸ್ವಾಧೀನಪಡಿಸಿಕೊಂಡ ಭೂಮಿಯಲ್ಲಿ ಐದು ಮಹಡಿಗಳ ವಾಣಿಜ್ಯ ಸಂಕೀರ್ಣವನ್ನು ನಿರ್ಮಿಸಲು ಗುತ್ತಿಗೆದಾರರಿಗೆ ಅನುಮತಿ ನೀಡಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ತಾವು ಅಭಿವೃದ್ಧಿ ಅಥವಾ ಮೂಲಸೌಕರ್ಯ ಯೋಜನೆಗಳ ವಿರೋಧಿಯಲ್ಲ, ಆದರೆ ಮೂಲಸೌಕರ್ಯದ ಹೆಸರಿನಲ್ಲಿ ಬೆಂಗಳೂರಿನ ಹಸಿರು ಪರಂಪರೆಯನ್ನು ರಿಯಲ್ ಎಸ್ಟೇಟ್ ಲಾಭಕ್ಕಾಗಿ ಹಾಳುಮಾಡುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ತೇಜಸ್ವಿ ಸೂರ್ಯ ಪ್ರತಿಪಾದಿಸಿದ್ದಾರೆ.

### ದೆಹಲಿಯಲ್ಲೇ ಉಳಿದು ಲಾಬಿ ಮುಂದುವರಿಸುತ್ತಿರುವ ಸಚಿವ ಸ್ಥಾನಾಕಾಂಕ್ಷಿಗಳು

# ವಾರದೊಳಗೆ ಸಂಪುಟ ವಿಸ್ತರಣೆ

**ಬೆಂಗಳೂರು, ಜು.20:** ವಾರದೊಳಗೆ ಸಚಿವ ಸಂಪುಟ ವಿಸ್ತರಣೆಯಾಗುವ ಸಾಧ್ಯತೆ ಇರುವುದರಿಂದ ಅವಕಾಶ ಗಿಟ್ಟಿಸಲು ತೀವ್ರ ಲಾಬಿ ಮುಂದುವರಿದಿದ್ದು, ಹಿರಿಯ ಶಾಸಕರು ದೆಹಲಿಯಲ್ಲೇ ಬೀಡುಬಿಟ್ಟಿದ್ದು, ವರಿಷ್ಠರನ್ನು ಭೇಟಿ ಮಾಡುತ್ತಿದ್ದಾರೆ. ಹಿರಿಯ ಶಾಸಕರಾದ ಆರ್.ವಿ.ದೇಶಪಾಂಡೆ, ಆರ್.ಬಿ.ತಿಮ್ಮಾಪೂರ್, ಬಸವರಾಜ ರಾಯರೆಡ್ಡಿ ಸೇರಿದಂತೆ ಹಲವರು ದೆಹಲಿಯಲ್ಲೇ ಉಳಿದಿದ್ದಾರೆ.

ಕಳೆದ ವಾರ ಕಾಂಗ್ರೆಸ್ ಹೈಕಮಾಂಡ್ ನಾಯಕರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರನ್ನು ದೆಹಲಿಗೆ ಆಹ್ವಾನಿಸಿ, ಸಂಪುಟ ವಿಸ್ತರಣೆ, ಪಕ್ಷ ಸಂಘಟನೆ ಸೇರಿ ಮಹತ್ವದ ವಿಚಾರಗಳನ್ನು ಚರ್ಚೆ ನಡೆಸಿದ್ದರು. ಆದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ದೆಹಲಿಯಲ್ಲಿಲ್ಲದ ಕಾರಣಕ್ಕೆ ಚರ್ಚೆ ಅಪೂರ್ಣವಾಗಿತ್ತು. ಆಗಸ್ಟ್ ಮೊದಲ ವಾರದಿಂದ ವಿಧಾನಮಂಡಲ ಅಧಿವೇಶ ಆರಂಭವಾಗಲಿದೆ. ಅದಕ್ಕೂ ಮುನ್ನವೇ ಸಂಪುಟ ವಿಸ್ತರಣೆ ಮಾಡುತ್ತೇವೆ ಎಂದು ಮುಖ್ಯಮಂತ್ರಿಗಳು ಭಾನುವಾರ ಹೇಳಿದ್ದರು. ಈ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆ ಮತ್ತು ಲಾಬಿ ಜೋರಾಗಿವೆ.

ಕಳೆದವಾರ ದೆಹಲಿಗೆ ತೆರಳಿದ್ದ ಕೆಲವು ಶಾಸಕರು ಬೆಂಗಳೂರಿಗೆ ವಾಪಸ್ಸಾಗಿಲ್ಲ. ದೆಹಲಿಯಲ್ಲೇ ಉಳಿದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್ ಸುರ್ಜೇವಾಲ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸುತ್ತಿದ್ದಾರೆ.

## ಸಚಿವ ಸ್ಥಾನ ಸಿಗಲಿದೆ: ಅಜಯ್‌ಸಿಂಗ್ ವಿಶ್ವಾಸ

ಸುದ್ದಿಗಾರರೊಂದಿಗೆ ಮಾತನಾಡಿರುವ ಶಾಸಕ ಅಜಯ್ ಸಿಂಗ್, ಈ ಬಾರಿ ನನಗೆ ಸಂಪುಟದಲ್ಲಿ ಅವಕಾಶ ಸಿಗಲಿದೆ ಎಂಬ ವಿಶ್ವಾಸವಿದೆ. ಎಲ್ಲಾ ನಾಯಕರು ನನ್ನ ಪರವಾಗಿ ಮಾತನಾ ಡಿದ್ದಾರೆ. ಈ ಹಿಂದೆಯೂ ಆಶ್ವಾಸನೆ ನೀಡಲಾಗಿತ್ತು.



ನಾಳೆ ಎಐಸಿಸಿ ಅಧ್ಯಕ್ಷರ ಹುಟ್ಟುಹಬ್ಬವಿದೆ. ಹೀಗಾಗಿ ಅವರಿಗೆ ಶುಭ ಹಾರೈಸಲು ದೆಹಲಿಗೆ ತೆರಳುತ್ತಿದ್ದೇನೆ. ಈ ಸಂದರ್ಭದಲ್ಲಿ ಪಕ್ಷದ ಹಿರಿಯ ನಾಯಕರ ಜೊತೆ ಮಾತುಕತೆ ನಡೆಸುವುದಾಗಿ ತಿಳಿಸಿದ್ದಾರೆ.

ಎಐಸಿಸಿ ಅಧ್ಯಕ್ಷರನ್ನು ಭೇಟಿಯಾಗುವೆ: ಬೇಳೂರು ಗೋಪಾಲಕೃಷ್ಣ

**ಸಚಿವ ಸ್ಥಾನಕ್ಕಾಗಿ ಪ್ರಬಲ ಆಕಾಂಕ್ಷಿಯಾಗಿದ್ದೇನೆ.** ಎಲ್ಲರೂ ಅವಕಾಶ ಕೇಳುತ್ತಾರೆ. ಆದರೆ ನಿರ್ಧರಿಸುವುದು ಹೈಕಮಾಂಡ್ ಎಂದಿದ್ದಾರೆ. ಸಂಪುಟದಲ್ಲಿ ಹೊಸಬರಿಗೆ ಅವಕಾಶ ನೀಡುವಂತೆ ರಾಹುಲ್ ಹೇಳಿದ್ದಾರೆ. ಜಾತಿ ಮತ್ತು ಸಮುದಾಯಕ್ಕೆ ಆದ್ಯತೆ ಮೇರೆಗೆ ಮತ್ತು ಜಿಲ್ಲಾವಾರು ಪ್ರಾತಿನಿಧ್ಯವನ್ನು ಪರಿಗಣಿಸಬೇಕು ಎಂದಿದ್ದಾರೆ. ದೆಹಲಿಗೆ ತೆರಳಿ ಎಐಸಿಸಿ ಅಧ್ಯಕ್ಷರನ್ನು ಭೇಟಿ ಮಾಡುತ್ತೇನೆ ಎಂದು ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಹೇಳಿದ್ದಾರೆ.

# ವಿಡಿಯೋ ಕಾನ್ಪರೆನ್ಸ್ ಮೂಲಕ ಅಜ್ಜಿ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ ಪ್ರಜ್ವಲ್ ರೇವಣ್ಣ

**ಬೆಂಗಳೂರು, ಜು.20:** ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರು ತಮ್ಮ ಅಜ್ಜಿ, ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರ ಪತ್ನಿ ಚೆನ್ನಮ್ಮ ಅಂತ್ಯಕ್ರಿಯೆಗೆ ಪರೋಲ್ ಪಡೆಯಲು ನಿರಾಕರಿಸಿದ್ದು, ಕೇಂದ್ರ ಕಾರಾಗೃಹದಿಂದ ವಿಡಿಯೋ ಕಾನ್ಫರೆನ್ಸ್ (ವರ್ಚುವಲ್) ಮೂಲಕ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದರು. ಅಪರಾಧಿ ಪ್ರಜ್ವಲ್ ರೇವಣ್ಣ ಅವರು ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ತಾತ್ಕಾಲಿಕ ಬಿಡುಗಡೆ ಅಥವಾ ಪರೋಲ್ ಕೋರಿ ಯಾವುದೇ ಅರ್ಜಿ ಸಲ್ಲಿಸಿಲ್ಲ. ಬದಲಾಗಿ, ಅವರು ಅಂತ್ಯಕ್ರಿಯೆಯಲ್ಲಿ ವರ್ಚುವಲ್ ಆಗಿ ಭಾಗವಹಿಸಲು ಜೈಲು ಅಧಿಕಾರಿಗಳಿಂದ ಅನುಮತಿ ಕೋರಿದರು. ಈ ಹಿನ್ನೆಲೆಯಲ್ಲಿ ಮಾನವೀಯ



ಆಧಾರದ ಮೇಲೆ ವಿಡಿಯೋ ಕಾನ್ಫರೆನ್ಸ್ ಮೂಲಕ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಅನುಮೋದಿಸಲಾಯಿತು ಎಂದು ಬೆಂಗಳೂರು ಜೈಲು ಅಧಿಕಾರಿಗಳು ತಿಳಿಸಿದ್ದಾರೆ. ಅಂತ್ಯಕ್ರಿಯೆಯ ಸ್ಥಳಕ್ಕೆ ಪ್ರಯಾಣಿಸಲಾಗದ ಕಾರಣ, ಪ್ರಜ್ವಲ್ ರೇವಣ್ಣ ಅವರ ಬಂಧಿಖಾನೆಯಲ್ಲಿ ಒದಗಿಸಲಾದ ದೂರದರ್ಶನ ಸೆಟ್ ಮೂಲಕ ಅಥವಾ ಜೈಲು ಆಡಳಿತವು ಏರ್ಪಡಿಸಿದ ವೀಡಿಯೊ ಕಾನ್ಫರೆನ್ಸಿಂಗ್ ಸೌಲಭ್ಯದ ಮೂಲಕ ಅಂತಿಮ ವಿಧಿಗಳನ್ನು ವೀಕ್ಷಿಸಿದರು. ಪ್ರಜ್ವಲ್ ರೇವಣ್ಣ ಪೆರೋಲ್ ಪಡೆಯದಿರಲು ಅವರ ತಂದೆ, ಮಾಜಿ ಸಚಿವ ಮತ್ತು ಜೆಡಿಎಸ್ ಶಾಸಕ ಎಚ್ ಡಿ ರೇವಣ್ಣ ಅವರ ನೀಡಿದ ಸಲಹೆಯನ್ನು ಅನುಸರಿಸಿ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅತ್ಯಾಚಾರ ಪ್ರಕರಣದಲ್ಲಿ ಶಿಕ್ಷೆಗೊಳಗಾದ ಪ್ರಜ್ವಲ್ ತನ್ನ ಅಜ್ಜಿಯ ಅಂತ್ಯಕ್ರಿಯೆಯಲ್ಲಿ ಭಾಗಿಯಾದರೆ ಸಾರ್ವಜನಿಕರ ಗಮನಕ್ಕೆ ಕಾರಣವಾಗಬಹುದು. ಜತೆಗೆ ಇದನ್ನು ನಿರ್ವಹಿಸಲು ಕುಟುಂಬ ಮತ್ತು ಅಧಿಕಾರಿಗಳಿಗೆ ಕಷ್ಟವಾಗಬಹುದು ಎಂದು ಕುಟುಂಬ ಭಾವಿಸಿರುವುದಾಗಿ ಆಪ್ತ ಮೂಲಗಳಿಂದ ತಿಳಿದುಬಂದಿದೆ. ಸಾಮಾನ್ಯ ಸಂದರ್ಭಗಳಲ್ಲಿ, ಶಿಕ್ಷೆಗೊಳಗಾದ ಅಪರಾಧಿ ಕನಿಷ್ಠ ನಿಗದಿತ ಅವಧಿಯ ಜೈಲು ಶಿಕ್ಷೆಯನ್ನು ಅನುಭವಿಸಿದ ನಂತರವೇ ಪೆರೋಲ್‌ಗೆ ಅರ್ಹನಾಗುತ್ತಾನೆ. ಇದಲ್ಲದೆ, ಅತ್ಯಾಚಾರದಂತಹ ಗಂಭೀರ ಅಪರಾಧಗಳಲ್ಲಿ ಪೆರೋಲ್ ಅಥವಾ ತುರ್ತು ಬಿಡುಗಡೆ ಅಸಾಧಾರಣ ಸಂದರ್ಭಗಳಲ್ಲಿ ಮಾತ್ರ ಪೆರೋಲ್ ನೀಡಲಾಗುತ್ತದೆ. ಜತೆಗೆ ಸಮರ್ಥ ಅಧಿಕಾರಿಗಳಿಂದ ಅನುಮೋದನೆಗೆ ಒಳಪಟ್ಟಿರುತ್ತದೆ.

# ಬರ ಘೋಷಣೆ ಸಂಬಂಧ ಕಠಿಣ ನಿಯಮ ಸಡಿಲಿಸಿ ಕೇಂದ್ರದ ವಿರುದ್ಧ ಸಚಿವ ಖರ್ಗೆ ಅಸಮಾಧಾನ

**ಬೆಂಗಳೂರು, ಜು.20:** ರಾಜ್ಯದಲ್ಲಿ ಉಂಟಾಗಿರುವ ತೀವ್ರ ಬರಗಾಲ ಹಾಗೂ ರೈತರ ಆತ್ಮಹತ್ಯೆ ವಿಚಾರಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೇಂದ್ರ ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದೆಹಲಿಗೆ ನಿರ್ಗಮಿಸುವ ಮುನ್ನ ಬೆಂಗಳೂರಿನ ಸದಾಶಿವನಗರ



ನಿವಾಸದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದ ನೈಜ ಪರಿಸ್ಥಿತಿಯ ಕುರಿತು ಈಗಾಗಲೇ ಕೇಂದ್ರಕ್ಕೆ ವಿವರವಾದ ಪತ್ರ ಬರೆಯಲಾಗಿದೆ. ಬರ ಘೋಷಣೆಗೆ ಸಂಬಂಧಿಸಿದ ಕಠಿಣ ನಿಯಮಗಳನ್ನು ಕೇಂದ್ರ ಸರ್ಕಾರ ಕೂಡಲೇ ಸಡಲಿಸಬೇಕು. ನಿಯಮಗಳು ಸಡಲಿಕೆಯಾದರೆ ರಾಜ್ಯದ ಸಮಸ್ತ ರೈತರಿಗೂ ಹಾಗೂ ಸಾಮಾನ್ಯ ಜನರಿಗೂ ಹೆಚ್ಚಿನ ಅನುಕೂಲವಾಗಲಿದೆ. ರಾಜ್ಯ ಸರ್ಕಾರವು ರೈತರ ಆತ್ಮಹತ್ಯೆ ತಡೆಯಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದು, ಅತಿ ಹೆಚ್ಚು ರೈತರಿಗೆ ಬೆಳೆ ವಿಮೆ ತಲುಪಿಸಿದ ಹೆಗ್ಗಳಿಕೆ ನಮ್ಮ ರಾಜ್ಯಕ್ಕಿದೆ. ಇದರಲ್ಲಿ ರಾಜ್ಯ ದೇಶದಲ್ಲೇ ಎರಡನೇ ಸ್ಥಾನದಲ್ಲಿದೆ ಎಂದು ವಿವರಿಸಿದರು.

ಪ್ರಸ್ತುತ ಎದುರಾಗಿರುವ ಸೂಪರ್ ಎಲ್‌ನಿನೋ ಪ್ರಭಾವವು ಕೇವಲ ರಾಜಕೀಯ ವಿಚಾರವಲ್ಲ, ಇದು ಇಡೀ ರಾಷ್ಟ್ರದ ಮೇಲಾಗಿರುವ ಪರಿಸರ ವೈಪರೀತ್ಯವಾಗಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಕುಡಿಯುವ ನೀರು, ಜಾನುವಾರುಗಳ ಮೇವಿನ ಲಭ್ಯತೆ ಕುರಿತು ನಿರಂತರ ಮುನ್ನೆಚ್ಚರಿಕಾ ಸಭೆಗಳನ್ನು ನಡೆಸುತ್ತಿದೆ. ರಾಜ್ಯ ಸರ್ಕಾರ ತನ್ನ ಜವಾಬ್ದಾರಿಯನ್ನು ನಿಭಾಯಿಸುತ್ತಿದ್ದು, ಕೇಂದ್ರ ಸರ್ಕಾರವೂ ಸೂಕ್ತ ರೀತಿಯಲ್ಲಿ ಸ್ಪಂದಿಸಬೇಕಿದೆ ಎಂದು ಹೇಳಿದರು. ಇಲ್ಲಿಯವರೆಗೆ ಕೇಂದ್ರ ಸರ್ಕಾರವು ರಾಜ್ಯಗಳೊಂದಿಗೆ ಯಾವುದೇ ಸಭೆ ನಡೆಸಿ ಸಲಹೆ-ಸೂಚನೆಗಳನ್ನು ಕೋರಿಲ್ಲ. ಕಳೆದ ಬಾರಿಯೂ ಪರಿಹಾರ ಧನಕ್ಕಾಗಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಬೇಕಾಯಿತು. ಸುಪ್ರೀಂ ಕೋರ್ಟ್ ಛೀಮಾರಿ ಹಾಕಿದ ನಂತರವಷ್ಟೇ ರೈತರಿಗೆ ಅನುಕೂಲವಾಯಿತು. ಎಲ್ಲವೂ ರಾಜ್ಯದ ಜವಾಬ್ದಾರಿ ಎಂದರೆ ಕೇಂದ್ರ ಸರ್ಕಾರದ ಹೊಣೆಗಾರಿಕೆ ಏನೆಂದು ಅವರು ಪ್ರಶ್ನಿಸಿದರು.

# ರೈತರ ನೆರವಿಗೆ ಧಾವಿಸಿ: ಮಾಜಿ ಸಿಎಂ ಬಿ.ಎಸ್‌ವೈ ಆಗ್ರಹ

**ಬೆಂಗಳೂರು, ಜು.20:** ರಾಜ್ಯದಲ್ಲಿ ಬರಗಾಲ ತೀವ್ರಗೊಂಡಿದ್ದು, ರಾಜ್ಯ ಸರಕಾರವು ಕೂಡಲೇ ರೈತರ ನೆರವಿಗೆ ಧಾವಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆಗ್ರಹಿಸಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಇಡೀ ರಾಜ್ಯದ ಯಾವುದೇ ಜಲಾಶಯ, ಅಣೆಕಟ್ಟುಗಳಲ್ಲಿ ನೀರಿಲ್ಲ. ಬಿತ್ತಿದ ಬಿತ್ತನೆ ಬೀಜ ಮೊಳಕೆ ಒಡೆದು ಹಾಳಾಗಿದೆ. ಶೇ 10 ಫಸಲು



ಬರದಂಥ ಸ್ಥಿತಿ ಇದೆ. ತೀವ್ರ ಬರಗಾಲವಿದ್ದರೂ ಈ ಸರಕಾರ ಮೌನವಾಗಿದೆ. ಇದುವರೆಗೆ ಏನೂ ತೀರ್ಮಾನ ತೆಗೆದುಕೊಂಡಿಲ್ಲ ಎಂದು ಆಕ್ಷೇಪಿಸಿದರು. ಸರಕಾರ ಪ್ರತಿ ರೈತರಿಗೆ ಕನಿಷ್ಠ 50 ಸಾವಿರ ರೂ. ಪರಿಹಾರ ಕೊಟ್ಟು ಅವರ ನೆರವಿಗೆ ಬಂದರೆ ಅವರಿಗೆ ಉಸಿರಾಡಲು ಅನುಕೂಲ ಆಗಲಿದೆ ಎಂದು ತಿಳಿಸಿದರು. ಆ ಕೆಲಸವನ್ನಾದರೂ ಮಾಡಬೇಕೆಂದು ಒತ್ತಾಯಿಸಿದರು.

## ಗಂಗಮ್ಮಾ ಸೋಮಪ್ಪಾ ಬೊಮ್ಮಾಯಿ ಫೌಂಡೇಶನ್‌ನಿಂದ ಪುಸ್ತಕ ಪ್ರಶಸ್ತಿಗಾಗಿ ಕೃತಿಗಳ ಆಹ್ವಾನ

ಹುಬ್ಬಳ್ಳಿ, ಜು.20: ಗಂಗಮ್ಮ ಸೋಮಪ್ಪ ಬೊಮ್ಮಾಯಿ ಎಜುಕೇಶನ್ ಆಂಡ್ ವೆಲ್ ಫೇರ್ ಫೌಂಡೇಶನ್ ಕಳೆದ ಕೆಲವು ವರ್ಷಗಳಿಂದ ಕನ್ನಡದ ಶ್ರೇಷ್ಠ ಕೃತಿಗಳಿಗೆ ನೀಡುತ್ತಾ ಬಂದಿದ್ದು, ಪ್ರತಿಷ್ಠಿತ ಪುಸ್ತಕ ಪ್ರಶಸ್ತಿಗಳಿಗಾಗಿ ಲೇಖಕರಿಂದ ಕೃತಿಗಳನ್ನು ಆಹ್ವಾನಿಸಿದೆ. ಈ ಕುರಿತು ಸಂಸ್ಥೆಯ ಅಧ್ಯಕ್ಷಹಾಗೂ ಸಂಸದ ಬಸವರಾಜ ಬೊಮ್ಮಾಯಿ ಪ್ರಕಟಣೆ ನೀಡಿದ್ದಾರೆ. ಸಾಹಿತ್ಯ ಕ್ಷೇತ್ರದ ಮೂರು ವಿಭಿನ್ನ ಪ್ರಕಾರಗಳ ಕೃತಿಗಳಿಗೆ ಈ ಪ್ರಶಸ್ತಿಗಳನ್ನು ನೀಡಲಾಗುತ್ತಿದ್ದು, 'ಜಾನಪದ ಸಿರಿ ಪ್ರಶಸ್ತಿ' ಜಾನಪದ ಕ್ಷೇತ್ರಕ್ಕೆ ಸಂಬಂಧಿಸಿದ ಅತ್ಯುತ್ತಮ ಕೃತಿಗೆ ನೀಡಲಾಗುತ್ತದೆ.

ಅಕ್ಕ ಪ್ರಶಸ್ತಿ: ಮಹಿಳಾ ಲೇಖಕಿಯರು ರಚಿಸಿದ ಯಾವುದೇ ಸಾಹಿತ್ಯ ಪ್ರಕಾರದ ಕೃತಿಗೆ. ?ಅರಳು ಮೊಗ್ಗು ಪ್ರಶಸ್ತಿ: 18 ವರ್ಷದೊಳಗಿನ ಮಕ್ಕಳು ರಚಿಸಿದ ಯಾವುದೇ ಪ್ರಕಾರದ ಸಾಹಿತ್ಯ ಕೃತಿಗೆ ಪ್ರಶಸ್ತಿ ನೀಡಲಾಗುತ್ತದೆ.

ಪ್ರತಿಯೊಂದು ಪ್ರಶಸ್ತಿಯು 25,000 ರೂ.ನಗದು ಒಳಗೊಂಡಿದೆ ಎಂದು ಬೊಮ್ಮಾಯಿ ತಿಳಿಸಿದ್ದಾರೆ. ಈ ಪ್ರಶಸ್ತಿಗೆ ಜನವರಿ 2025 ರಿಂದ ಡಿಸೆಂಬರ್ 2025 ರ ಅವಧಿಯಲ್ಲಿ ಪ್ರಥಮ ಬಾರಿಗೆ ಮುದ್ರಣಗೊಂಡ (ಪ್ರಥಮ ಆವೃತ್ತಿ) ಮೇಲ್ಕಂಡ ಪ್ರಕಾರದ ಕೃತಿಗಳು ಮಾತ್ರ ಅರ್ಹವಾಗಿರುತ್ತವೆ. ನವೆಂಬರ್ 5, 2026 ರೊಳಗೆ ಆಸಕ್ತ ಲೇಖಕರು ತಮ್ಮ ಕೃತಿಯ 3 ಪ್ರತಿಗಳನ್ನು ಚಂದ್ರಶೇಖರ ವಸ್ತ್ರದ, 'ಬೆಳಗು', ಆನಂದ ಆಶ್ರಮ ರಸ್ತೆ, ಪಂಚಾಕ್ಷರಿ ನಗರ, 5ಎ ಕ್ರಾಸ್, ಗದಗ – 582101. ದೂರವಾಣಿ ಸಂಖ್ಯೆ: 94486–77434 ಈ ವಿಳಾಸಕ್ಕೆ ಕಳುಹಿಸಲು ಕೋರಲಾಗಿದೆ.

## ಸಣ್ಣ ಮತ್ತು ಜಿಲ್ಲಾ ಪತ್ರಿಕೆಗಳ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಮೋಹನ್ ಕುಲಕರ್ಣಿ ನೇಮಕ



ವಿಜಯಪುರ, ಜು.20: ಸರ್ಕಾರದಿಂದ ಮಾನ್ಯತೆ ಪಡೆದಿರುವ ಕರ್ನಾಟಕ ಸಣ್ಣ ಮತ್ತು ಜಿಲ್ಲಾ ಪತ್ರಿಕೆಗಳ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿಯನ್ನಾಗಿ ಮೋಹನ ಕುಲಕರ್ಣಿಯವರನ್ನು ನೇಮಕ ಮಾಡಲಾಗಿದೆ ಎಂದು ಸಂಘದ ರಾಜ್ಯ ಅಧ್ಯಕ್ಷ ಎಸ್.ಮಂಜುನಾಥ ನೇಮಕ ಮಾಡಿ ಆದೇಶಿಸಿದ್ದಾರೆ.

ಸಂಘದ ಬೆಳವಣಿಗೆಗೆ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದು ಹಾಗೂ ಸಂಘದ ಪದಾಧಿಕಾರಿಗಳೊಂದಿಗೆ ನಿಕಟ ಸಂಪರ್ಕ ಇಟ್ಟುಕೊಂಡು ಎಲ್ಲರನ್ನು ಪರಿಗಣನೆಗೆ ತೆಗೆದುಕೊಂಡು ಸಂಘದ ಜವಾಬ್ದಾರಿಯನ್ನು ವಹಿಸಿಕೊಳ್ಳಲು ಸೂಚಿಸಿದ್ದಾರೆ.

## ಪ್ರವಾಸಿಗರನ್ನು ಸೆಳೆಯುತ್ತಿರುವ ಕೊಡಗಿನ ಜಲಪಾತಗಳು



ಮಡಿಕೇರಿ, ಜು.20: ಮಳೆಗಾಲದಲ್ಲಿ ಮೈದುಂಬಿ ಧುಮ್ಮಿಕ್ಕುತ್ತಿರುವ ಕೊಡಗಿನ ಜಲಪಾತಗಳು ಪ್ರವಾಸಿಗರನ್ನು ಸೆಳೆಯುತ್ತಿವೆ. ಆದರೆ ಕೆಲವರ ನಿರ್ಲಕ್ಷ್ಯದ ಸಾಹಸ ಈಗ ಆತಂಕಕ್ಕೂ ಕಾರಣವಾಗಿದೆ. ಮಳೆಗಾಲದ ಅಬ್ಬರಕ್ಕೆ ಕೊಡಗು ಜಿಲ್ಲೆಯ ಜಲಪಾತಗಳು ಭೋರ್ಗರೆದು ಹರಿಯುತ್ತಿವೆ. ಈ ಸುಂದರ ದೃಶ್ಯವನ್ನು ನೋಡಲು ಪ್ರತಿದಿನ ಸಾವಿರಾರು ಪ್ರವಾಸಿಗರು ಆಗಮಿಸುತ್ತಿದ್ದಾರೆ. ಆದರೆ ಕೆಲವರು ಪ್ರಕೃತಿಯ ಸೌಂದರ್ಯವನ್ನು ಸವಿಯುವ ಬದಲು ತಮ್ಮ ಜೀವವನ್ನೇ ಪಣಕ್ಕಿಟ್ಟು ಅಪಾಯಕಾರಿ ಸಾಹಸ ಮಾಡುತ್ತಿರುವುದು ಕಳವಳ ಮೂಡಿಸಿದೆ. ಕೊಡಗಿನ ಪ್ರಸಿದ್ಧ ಅಬ್ಬಿ ಜಲಪಾತ ಹಾಗೂ ಮೇಘರ, ಸೂರ್ಲಬ್ಬಿ ಜಲಪಾತಗಳಲ್ಲಿ ಪ್ರವಾಸಿಗರ ನಿರ್ಲಕ್ಷ್ಯ ಹೆಚ್ಚಾಗಿದೆ. ಜಲಪಾತದ ಬುಡಕ್ಕೆ ಇಳಿದು ಈಜುವುದು, ಅಪಾಯಕಾರಿ ಬಂಡೆಗಳ ಮೇಲೆ ನಿಂತು ಸೆಲ್ಫಿ ಹಾಗೂ ವಿಡಿಯೊ ತೆಗೆಯುವುದು ಸಾಮಾನ್ಯ ದೃಶ್ಯವಾಗಿದೆ. ಈ ಹಿಂದೆಯೂ ಇದೇ ಜಲಪಾತಗಳಲ್ಲಿ ನೀರಿನ ಸೆಳೆತಕ್ಕೆ ಸಿಲುಕಿ ಹಲವರು ಪ್ರಾಣ ಕಳೆದುಕೊಂಡಿದ್ದಾರೆ. ಇನ್ನೂ ಅನೇಕ ಮಂದಿಯನ್ನು ಸ್ಥಳೀಯರು ತಮ್ಮ ಜೀವದ ಹಂಗು ತೊರೆದು ರಕ್ಷಿಸಿದ ಘಟನೆಗಳೂ ನಡೆದಿವೆ. ಆದರೂ ಎಚ್ಚರಿಕೆಗಳನ್ನು ಲೆಕ್ಕಿಸದೆ ಕೆಲವರು ಅಪಾಯವನ್ನು ಆಹ್ವಾನಿಸುತ್ತಿರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ.ಪ್ರವಾಸಿಗರು ಸುರಕ್ಷತಾ ನಿಯಮಗಳನ್ನು ಪಾಲಿಸಬೇಕು. ಅಪಾಯಕಾರಿ ಪ್ರದೇಶಗಳಿಗೆ ಇಳಿಯುವುದನ್ನು ತಪ್ಪಿಸಬೇಕು. ಜಲಪಾತಗಳ ಬಳಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ನಿಗಾ ಹೆಚ್ಚಿಸಿ, ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

## ಮಂಡ್ಯ ಜಿಲ್ಲೆಯ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿದ ಮೇಯರ್ ಗಾದೆಪ್ಪ



ಬಳ್ಳಾರಿ, ಜು.20: ಘನತ್ಯಾಜ್ಯ ಮತ್ತು ತ್ಯಾಜ್ಯ ನೀರಿನ ಸಂಗ್ರಹಣೆ, ನಿರ್ವಹಣೆ ಹಾಗೂ ಶುದ್ಧೀಕರಣ ವ್ಯವಸ್ಥೆಯ ಕಾರ್ಯವೈಖರಿಯನ್ನು ಅಧ್ಯಯನ ಮಾಡುವ ಉದ್ದೇಶದಿಂದ ಮಂಡ್ಯ ನಗರಸಭೆಯ ಅಧಿಕಾರಿಗಳ ತಂಡವು ಮಂಡ್ಯ ಜಿಲ್ಲೆಯ ಖಾಸಗಿ ಸಂಸ್ಥೆ ನಿರ್ವಹಿಸುತ್ತಿರುವ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಭೇಟಿಯ ವೇಳೆ ತ್ಯಾಜ್ಯ ಸಂಗ್ರಹಣೆ, ವಿಂಗಡಣೆ, ವೈಜ್ಞಾನಿಕ ವಿಲೇವಾರಿ, ತ್ಯಾಜ್ಯ ನೀರಿನ ಶುದ್ಧೀಕರಣ ಪ್ರಕ್ರಿಯೆ ಹಾಗೂ ಘಟಕದಲ್ಲಿ ಅಳವಡಿಸಿರುವ ತಾಂತ್ರಿಕ ವ್ಯವಸ್ಥೆಗಳ ಕುರಿತು ಅಧಿಕಾರಿಗಳು ಮಾಹಿತಿ ಪಡೆದುಕೊಂಡರು. ಘಟಕದ ಕಾರ್ಯನಿರ್ವಹಣೆಯನ್ನು ವೀಕ್ಷಿಸಿ, ತಮ್ಮ ನಗರಸಭೆಯಲ್ಲಿ ಅಳವಡಿಸಬಹುದಾದ ಉತ್ತಮ ಪದ್ಧತಿಗಳ ಬಗ್ಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಮಹಾನಗರ ಪಾಲಿಕೆ ಅಧಿಕಾರಿಗಳೊಂದಿಗೆ ಮೇಯರ್ ಗಾದೆಪ್ಪ, ಸ್ಥಾಯಿ ಸಮಿತಿ ಅಧ್ಯಕ್ಷರಾದ ಪೇರಂ ವಿವೇಕ್ ಹಾಗೂ ವಿ.ಕುಬೇರ ಅವರು, ಘಟಕದ ವಿವಿಧ ವಿಭಾಗಗಳನ್ನು ಪರಿಶೀಲಿಸಿ ಅಧಿಕಾರಿಗಳಿಗೆ ಅಗತ್ಯ ಮಾಹಿತಿಯನ್ನು ನೀಡಿದರು.

ನಗರಗಳ ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆಗೆ ವೈಜ್ಞಾನಿಕ ತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಅತ್ಯಗತ್ಯವಾಗಿದ್ದು, ಈ ರೀತಿಯ ಅಧ್ಯಯನ ಭೇಟಿಗಳು ಉತ್ತಮ ಆಡಳಿತ ಮತ್ತು ಪರಿಣಾಮಕಾರಿ ತ್ಯಾಜ್ಯ ನಿರ್ವಹಣಾ ಕ್ರಮಗಳನ್ನು ಅಳವಡಿಸಿಕೊಳ್ಳಲು ಸಹಕಾರಿಯಾಗಲಿವೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟರು.

## ಉತ್ತಮ ಆರೋಗ್ಯ ಸೇವೆಯತ್ತ ಜಿಮ್ಸ್ ದಾಪುಗಾಲು: ಡಾ. ಎಸ್.ಆರ್. ಉಮೇಶ್

ಕಲಬುರಗಿ, ಜು. 20: ಅತಂತ್ರ ಬಡ ಮತ್ತು ಅಗತ್ಯವಿರುವ ರೋಗಿಗಳಿಗೆ ಅತ್ಯುತ್ತಮ ಆರೋಗ್ಯ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಜಿಮ್ಸ್ ಆಸ್ಪತ್ರೆಯು ನಿರಂತರ ತನ್ನ ಸೇವೆಗಳನ್ನು ವಿಸ್ತರಿಸಿಕೊಂಡು ಬಂದಿದ್ದು, ಯಶಸ್ವಿಯಾಗಿ ಸೂಪರ್ ಸ್ಪೆಷಾಲಿಟಿ ವೈದ್ಯಕೀಯ ಸೇವೆಗಳನ್ನು ಪ್ರಾರಂಭಿಸಿದೆ ಎಂದು ಕಲಬುರಗಿ ಜಿಮ್ಸ್ ಆಸ್ಪತ್ರೆಯ ನಿರ್ದೇಶಕ ಡಾ. ಉಮೇಶ್ ಎಸ್. ಆರ್.ಹೇಳಿದರು.

ನಗರದ ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಜಿಮ್ಸ್) ಆಸ್ಪತ್ರೆಯ ಸಭಾಂಗಣದಲ್ಲಿ ಆಯೋಜಿಸಿದ ಗುಲ್ಬರ್ಗಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್, ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಾಮಾನ್ಯ ವೈದ್ಯಕೀಯ ವಿಭಾಗ, ಸಿಟಿ ಬ್ರ್ಯಾಂಚ್, ಕಲಬುರಗಿ ಶಾಖೆಯ ಕೆಎಸ್‌ಸಿ–ಎಎಸ್‌ಐ ಮತ್ತು ಎಪಿಐ ಸಹಯೋಗದೊಂದಿಗೆ "ಎಚ್‌ಪಿಬಿ ಅಪ್‌ಡೇಟ್ಸ್" ಸಿಎಮ್‌ಇ–ಸಿಎಚ್, ಜಾಗೃತಿ ಮತ್ತು ವೈಜ್ಞಾನಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ಕಲಬುರಗಿ ನಗರದ ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಜಿಮ್ಸ್) ಆಸ್ಪತ್ರೆಯ ಸಭಾಂಗಣದಲ್ಲಿ ಆಯೋಜಿಸಿದ ಗುಲ್ಬರ್ಗಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್, ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಾಮಾನ್ಯ ವೈದ್ಯಕೀಯ ವಿಭಾಗ, ಸಿಟಿ ಬ್ರ್ಯಾಂಚ್, ಕಲಬುರಗಿ ಶಾಖೆಯ ಕೆಎಸ್‌ಸಿ–ಎಎಸ್‌ಐ ಮತ್ತು ಎಪಿಐ ಸಹಯೋಗದೊಂದಿಗೆ "ಎಚ್‌ಪಿಬಿ ಅಪ್‌ಡೇಟ್ಸ್" ಸಿಎಮ್‌ಇ–ಸಿಎಚ್, ಜಾಗೃತಿ ಮತ್ತು ವೈಜ್ಞಾನಿಕ ಕಾರ್ಯಕ್ರಮವನ್ನು ಜಿಮ್ಸ್ ನಿರ್ದೇಶಕ ಡಾ.ಉಮೇಶ್ ಎಸ್.ಆರ್. ಅವರು ಉದ್ಘಾಟಿಸಿ ಮಾತನಾಡಿದರು.

ಕಲಬುರಗಿಯ ಜಿಮ್ಸ್ ಆಸ್ಪತ್ರೆಯು ಅತ್ಯಾಧುನಿಕ ತಂತ್ರಜ್ಞಾನದ ಮಾಡ್ಯುಲರ್ ಆಪರೇಷನ್ ಥಿಯೇಟರ್‌ಗಳನ್ನು ಹೊಂದಿದ್ದು, ಲಿವರ್ (ಪಿತ್ತ ಜನಕಾಂಗ), ಗ್ಯಾಲ್‌ಬ್ಲಾಡರ್ (ಪಿತ್ತಕೋಶ), ಪ್ಯಾನ್‌ಕ್ರಿಯಾಸ್ (ಮೇದೋಜೀರಕ) ಗ್ರಂಥಿ ಹಾಗೂ ಎಂಡೋಸ್ಕೋಪಿ, ಲ್ಯಾಪರೊಸ್ಕೋಪಿ ಸೇರಿದಂತೆ ವಿವಿಧ ಅತ್ಯಾಧುನಿಕ ವೈದ್ಯಕೀಯ ಸವಲತ್ತುಗಳನ್ನು ರೋಗಿಗಳಿಗೆ ಒದಗಿಸುತ್ತಿದೆ. ಸಾಮಾನ್ಯ ಜನರಿಗೆ ಆಸ್ಪತ್ರೆಯ ಸೇವೆಗಳ ಬಗ್ಗೆ ಅರಿವು ಮೂಡಿಸಿ, ಉತ್ತಮ ಗುಣಮಟ್ಟದ ಚಿಕಿತ್ಸೆಯನ್ನು ರೋಗಿಗಳಿಗೆ ತಲುಪಿಸುವುದೇ ಆಸ್ಪತ್ರೆಯ ಮುಖ್ಯ ಗುರಿ ಎಂದರು.

ಜಿಮ್ಸ್ ಆಸ್ಪತ್ರೆಯ ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗದ ವೈದ್ಯಕೀಯ ಅಧೀಕ್ಷಕರು, ಪ್ರಾಧ್ಯಾಪಕರು, ಮುಖ್ಯಸ್ಥರು, ಹಾಗೂ ಕಾರ್ಯಕ್ರಮ ಆಯೋಜನಾ ಅಧ್ಯಕ್ಷರಾದ ಡಾ. ಶಿವಕುಮಾರ್ ಸಿ. ರಾಜೇಶ್ವರ್ ಸ್ವಾಗತಿಸಿ, ಜಿಮ್ಸ್ ಆಸ್ಪತ್ರೆಯಲ್ಲಿ ಈಗಾಗಲೇ ಗ್ಯಾಸ್ಟ್ರೋ ಸರ್ಜನ್ ಮತ್ತು ಮೆಡಿಕಲ್ ಗ್ಯಾಸ್ಟ್ರೋ ಎಂಟರಾಲಜಿಸ್ಟ್ ಮುಂತಾದ ವಿವಿಧ ಸೌಲಭ್ಯಗಳು ಲಭ್ಯವಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಸ್ತಾವಿಕವಾಗಿ ಮಾತನಾಡಿದರು.

ಆಯೋಜನಾ ಕಾರ್ಯದರ್ಶಿ ಡಾ. ಮಹಮ್ಮದ್ ಎಫ್. ಆರ್. ಶೋಯೆಬ್ ಎಂ.ಎಸ್., ಡಿಎನ್‌ಬಿ (ಸರ್ಜಿಕಲ್ ಗ್ಯಾಸ್ಟ್ರೋ ಎಂಟರಾಲಜಿ), ಸಹಾಯಕ ಪ್ರಾಧ್ಯಾಪಕರು, ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗ, ಜಿಮ್ಸ್, ಕಲಬುರಗಿ ಇವರು ಸೆಮಿನಾರ್ ಮಾಡಿ, ಯಕೃತ್ತಿನ ಪರೀಕ್ಷೆಗಳ ವಿಶ್ಲೇಷಣೆ: ರೋಗಗಳನ್ನು ಗುರುತಿಸುವುದು ಹೇಗೆ? ಮತ್ತು ಯಕೃತ್ತಿನ ಪರೀಕ್ಷೆಗಳು ಕೇವಲ ವೈದ್ಯರಿಗೆ ಮಾತ್ರವಲ್ಲ, ಸಾಮಾನ್ಯರಿಗೂ ಪ್ರಮುಖವಾದ ವಿಷಯವಾಗಿದೆ. ಈ ಪರೀಕ್ಷೆಯ ವರದಿಯಲ್ಲಿನ 'ಟ್ರಾನ್ಸ್‌ಮಿನೇಸ್' ಮಟ್ಟವು ಹೆಚ್ಚಾಗಿದ್ದರೆ, ಅದು ಯಕೃತ್ತಿನ ಸಮಸ್ಯೆಯನ್ನು ಸೂಚಿಸುತ್ತದೆ. ರೋಗಿಗಳಲ್ಲಿನ ರೋಗಲಕ್ಷಣಗಳನ್ನು ಮತ್ತು LFT ವರದಿಯ ಫಲಿತಾಂಶಗಳನ್ನು ಸಮಗ್ರವಾಗಿ ನೋಡಿದಾಗ ಮಾತ್ರ ಸರಿಯಾದ ರೋಗನಿರ್ಣಯ ಸಾಧ್ಯ ಎಂಬುದರ ಕುರಿತು ಸಂವಾದ ನಡೆಸಿದರು.

ಡಾ. ಮಹೇಶ್ ಶೆಟ್ಟಿ ಅವರು ಮಾತನಾಡಿ, ಪ್ಯಾಂಕ್ರಿಯಾಟಿಕ್ ಸ್ಯೂಡೋಸಿಸ್ಟ್ ನಿರ್ವಹಣೆ: ಶಸ್ತ್ರಚಿಕಿತ್ಸೆಯ ವಿಷಯದ ಕುರಿತು ಸಂವಾದ ಮಡಿಸಿದರು. ಕಾರ್ಯಕ್ರಮದಲ್ಲಿ ಡಾ. ಜೈರಾಜ್ ವಿ. ಬೊಮ್ಮನ್ ಎಂಡಿ, ಡಿಎನ್‌ಬಿ (ಮೆಡಿಕಲ್ ಗ್ಯಾಸ್ಟ್ರೋಎಂಟರಾಲಜಿ), ಸಹಾಯಕ ಪ್ರಾಧ್ಯಾಪಕರು, ಗ್ಯಾಸ್ಟ್ರೋಎಂಟರಾಲಜಿ ವಿಭಾಗ, ಎಸ್‌ಎಸ್‌ಹೆಚ್–ಜಿಮ್ಸ್, ಡಾ. ರವಿಶಂಕರ್ ಬಿ, ಡಾ. ಪ್ರಸಾದ್ ಬಾಬು, ಡಾ. ವಿಶ್ವನಾಥ್ ರೆಡ್ಡಿ ಸೇರಿದಂತೆ ಜಿಮ್ಸ್ ಯುಜಿ, ಪಿಜಿ ವಿದ್ಯಾರ್ಥಿಗಳು, ತಜ್ಞರು ಮುಂತಾದವರು ಉಪಸ್ಥಿತರಿದ್ದರು.

## ಕಾರಂಜಾ ಬಲದಂಡೆ ಕಾಲುವೆಗಳ ಆಧುನೀಕರಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ



ಬೀದರ್, ಜು.20: ಜಿಲ್ಲೆಯ ಕಾರಂಜಾ ಬಲದಂಡೆ ಕಾಲುವೆ 100ರಿಂದ 131ನೇ ಕಿ.ಮೀ.ವರೆಗಿನ ಮುಖ್ಯ ಕಾಲುವೆ ಮತ್ತು ವಿತರಣಾ ಕಾಲುವೆ, ಉಪ ವಿತರಣಾ ಕಾಲುವೆ ಆಧುನೀಕರಣ ಕಾಮಗಾರಿಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕಿ.ಮೀ 0 ಯಿಂದ 100 ರವರೆಗಿನ ಕಾಲುವೆ ಆಧುನೀಕರಣ ಕಾಮಗಾರಿಯಲ್ಲಿ ಬಿಟ್ಟುಹೋಗಿರುವ ವಿತರಣಾ ಕಾಲುವೆ, ಉಪ ಕಾಲುವೆಗಳನ್ನೂ ಆಧುನೀಕರಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಕಾಮಗಾರಿಗಳ ಒಟ್ಟು ವೆಚ್ಚ 2023–24ರ ದರಪಟ್ಟಿಯನ್ವಯ 180 ಕೋಟಿ ರೂ. ಅನುಮೋದಿಸಲಾಗಿದೆ ಎಂದು ತಿಳಿಸಿದ್ದಾರೆ.

ಹಿಂದುಳಿದ ಕಲ್ಯಾಣ ಕರ್ನಾಟಕದ ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಬ್ಯಾಲಹಳ್ಳಿ ಗ್ರಾಮದ ಸಮೀಪ ಕಾರಂಜಾ ನದಿಗೆ ಅಡ್ಡಲಾಗಿ ಕಟ್ಟಿರುವ ಅಣೆಕಟ್ಟೆಯ ಸಂಗ್ರಹಣಾ ಸಾಮರ್ಥ್ಯ 7.69 ಟಿಎಂಸಿ ಆಗಿದೆ. ಯೋಜನೆಯಡಿ ಹಂಚಿಕೆಯಾಗಿರುವ 9.27 ಟಿಎಂಸಿ ನೀರು ಬಳಸಿ, ಬೀದರ್ ಜಿಲ್ಲೆಯ 29227 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಈ ಕಾಲುವೆ ಆಧುನೀಕರಣ ನರವಾಗಲಿದೆ ಎಂದು ಹೇಳಿದ್ದಾರೆ.

ಕಾರಂಜಾ ಯೋಜನೆಯಡಿ 0.687 ಟಿ.ಎಂ.ಸಿ ನೀರನ್ನು ಕುಡಿಯುವ ನೀರಿನ ಯೋಜನೆಗೆ ಬಳಸಲು ಅವಕಾಶ ಕಲ್ಪಿಸಲಾಗಿದೆ. ಬಲದಂಡೆ ಕಾಲುವೆಡಯಿ 131 ಕಿ.ಮೀ ಕಾಲುವೆಯಿಂದ 19217 ಹೆಕ್ಟೇರ್ ಎಡದಂಡೆ ಕಾಲುವೆಗಳ 31 ಕಿ.ಮೀನಿಂದ 2521 ಹೆಕ್ಟೇರ್, ಏತ ನೀರಾವರಿ ಕಾಲುವೆ 24 ಕಿ.ಮೀಗಳಿಂದ 3873 ಹೆಕ್ಟೇರ್, ಅತಿವಾಳ ಏತ ನೀರಾವರಿ ಕಾಲುವೆಯಡಿ 3616 ಹೆಕ್ಟೇರ್ ನೀರಾವರಿ ಸೌಲಭ್ಯಕ್ಕೆ ಯೋಜನೆ ರೂಪಿಸಲಾಗಿದೆ ಎಂದೂ ವಿವರಿಸಿದ್ದಾರೆ.

ಬಹುದಿನಗಳಿಂದ ನೆನಗುದಿಗೆ ಬಿದ್ದಿದ್ದ ಈ ಕಾಲುವೆ ಆಧುನೀಕರಣ ಕಾಮಗಾರಿ ಆರಂಭಿಸುವಂತೆ ತಾವು ನಿರಂತರವಾಗಿ ಪ್ರಯತ್ನ ಮಾಡದ್ದು, ಯೋಜನೆಗೆ ಅನುಮೋದನೆ ನೀಡಿದ ಸಚಿವ ಸಂಪುಟದ ಎಲ್ಲ ಸಹೋದ್ಯೋಗಿಗಳಿಗೆ, ವಿಶೇಷವಾಗಿ ಮುಖ್ಯಮಂತ್ರಿಗಳು ಮತ್ತು ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವರು ಧನ್ಯವಾದ ಅರ್ಪಿಸುವುದಾಗಿ ತಿಳಿಸಿದ್ದಾರೆ.

## ಎತ್ತು, ಟ್ರ್ಯಾಕ್ಟರ್‌ಗೆ ಬಾಡಿಗೆಗೆ ಹಣವಿಲ್ಲದೇ ಬಿತ್ತನೆ ಕೂರಿಗೆಯನ್ನು ತಾವೇ ಎಳೆದ ವೃದ್ಧ ದಂಪತಿ...!



ಬೀದರ್, ಜು. 20: ತುತ್ತು ಅನ್ನಕ್ಕಾಗಿ ಜೀವಮಾನವಿಡೀ ಭೂಮಿತಾಯಿಯನ್ನೇ ನಂಬಿದ ವೃದ್ಧ ದಂಪತಿಗೆ ಇಂದು ಕೂರಿಗೆ ಎಳೆಯಲು ಎತ್ತುಗಳೂ ಇಲ್ಲ, ಟ್ರ್ಯಾಕ್ಟರ್ ಬಾಡಿಗೆಗೆ ಪಡೆಯಲು ಜೇಬಿನಲ್ಲಿ ಕಾಸೂ ಇಲ್ಲ. ಕೊನೆಗೆ ವಿಧಿಯಿಲ್ಲದೆ ತಾವೇ ನೇಗಿಲ ನೊಗಕ್ಕೆ ಹೆಗಲು ಕೊಟ್ಟು, ಹಸನು ಮಾಡಿದ ಮಣ್ಣಿನಲ್ಲಿ ಬೀಜ ಬಿತ್ತಿದ ಹೃದಯಸ್ಪರ್ಶಿ ಘಟನೆಯೊಂದು ಜಿಲ್ಲೆಯ ಹುಮನಾಬಾದ್ ತಾಲೂಕಿನ ಹಳ್ಳಿಖೇಡ (ಬಿ) ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ಆರ್ಥಿಕ ಸಂಕಷ್ಟದ ಸುಳಿಯಲ್ಲಿ ಸಿಲುಕಿರುವ ತಿಪ್ಪಣ್ಣ ಮತ್ತು ಗಂಗಮ್ಮ ದಂಪತಿಯೇ ಈ ಕಾಯಕ ಯೋಗಿಗಳು. ವಯೋಸಹಜ ಆಯಾಸವಿದ್ದರೂ, ಹೊಟ್ಟೆಪಾಡಿಗಾಗಿ ಬೆವರು ಸುರಿಸುತ್ತಾ ಇವರಿಬ್ಬರೂ ಕೂರಿಗೆ ಎಳೆಯುತ್ತಿರುವ ದೃಶ್ಯ ಪ್ರತಿಯೊಬ್ಬರ ಕಣ್ಣಾಲಿಗಳನ್ನು ಒದ್ದೆಯಾಗಿಸುವಂತಿದೆ.

ಸ್ವಂತ ಮನೆ ಇಲ್ಲದೆ, ಕೈಯಲ್ಲಿದ್ದ ಅಲ್ಪಸ್ವಲ್ಪ ಜಮೀನನ್ನೇ ನಂಬಿ ಈ ದಂಪತಿ ಬದುಕು ಸಾಗಿಸುತ್ತಿದ್ದಾರೆ. ಈ ಹಿಂದೆ ಮಳೆ ಕೊರತೆಯಿಂದಾಗಿ ಇವರು ಬಿತ್ತಿದ್ದ ಉದ್ದು ಸಂಪೂರ್ಣ ವಿಫಲವಾಗಿತ್ತು. ಕೈಗೆ ಬಂದ ತುತ್ತು ಬಾಯಿಗೆ ಬರದಂತಾದಾಗ ಧೃತಿಗೆಡದ ದಂಪತಿ, ಅದೇ ಜಮೀನಿನಲ್ಲಿ ಮತ್ತೆ ತೊಗರಿ ಬಿತ್ತನೆ ಮಾಡಲು ಮುಂದಾಗಿದ್ದಾರೆ. ಆದರೆ, ಎತ್ತುಗಳನ್ನು ಬಾಡಿಗೆಗೆ ತರಲು ಹಣವಿಲ್ಲದ ಕಾರಣ ತಾವೇ ಎತ್ತುಗಳ ಸ್ಥಾನದಲ್ಲಿ ನಿಂತು ಕೂರಿಗೆ ಎಳೆದಿದ್ದಾರೆ.

## ದಂಡೋತಿ ಮೊರಾರ್ಜಿ ವಸತಿ ಶಾಲೆ: 50 ವಿದ್ಯಾರ್ಥಿಗಳ ಅಸ್ವಸ್ಥ ಘಟನೆ ತನಿಖೆಗೆ ಬಿಜೆಪಿ ಆಗ್ರಹ

ಕಲಬುರಗಿ, ಜು. 20: ಜಿಲ್ಲೆಯ ಚಿತ್ತಾಪುರ ತಾಲೂಕಿನ ದಂಡೋತಿ ಗ್ರಾಮದ ಮುರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಯಲ್ಲಿ ವಿಷಪೂರಿತ ಆಹಾರ ಸೇವಿಸಿ 45 ಮಕ್ಕಳು ಅಸ್ವಸ್ಥಗೊಂಡ ಪ್ರಕರಣದ ಸಮಗ್ರ ತನಿಖೆ ನಡೆಸುವಂತೆ ಬಿಜೆಪಿ ನಿಯೋಗ ಜಿಲ್ಲಾಡಳಿತಕ್ಕೆ ಆಗ್ರಹಿಸಿದೆ.ಬಿಜೆಪಿ ಜಿಲ್ಲಾಧ್ಯಕ್ಷ, ಶಾಸಕರು ಹಾಗೂ ಮುಖಂಡರನ್ನು ಒಳಗೊಂಡಿದ್ದ ನಿಯೋಗ ದಂಡೋತಿ ಹಾಸ್ಟೆಲ್‌ಗೆ ಭೇಟಿ ನೀಡಿದಾಗ ಹಲವಾರು ಲೋಪಗಳು ಕಂಡು ಬಂದಿವೆ.

ಹೀಗಾಗಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರಿಗೆ ಮನವಿಪತ್ರ ಸಲ್ಲಿಸಿ ಒತ್ತಾಯಿಸಿತು.ವಿಧಾನ ಪರಿಷತ್ ಸದಸ್ಯರಾದ ಡಾ.ಬಿ.ಜಿ. ಪಾಟೀಲ್, ಶಶೀಲ್ ನಮೋಶಿ, ಶಾಸಕ ಡಾ.ಅವಿನಾಶ ಜಾಧವ್, ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೆಲ್ಲೂರ, ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ಮಾಜಿ ಅಧ್ಯಕ್ಷ ಶಿವರಾಜ ಪಾಟೀಲ್ ರದ್ದೇವಾಡಗಿ, ಮುಖಂಡರಾದ ಲಿಂಗರಾಜ ಬಿರಾದಾರ, ಅವ್ವಣ್ಣ ಮ್ಯಾಕೇರಿ, ಶರಣಪ್ಪ ತಳವಾರ, ಕುಲಕರ್ಣಿ ಡಿಸಿ ಜತೆ ಸುಮಾರು ಹೊತ್ತು ಚರ್ಚಿಸಿದರು.



ಕಲಬುರಗಿ ಜಿಲ್ಲಾ ಬಿಜೆಪಿ ಅಧ್ಯಕ್ಷರು ಮತ್ತಿತರ ಪದಾಧಿಕಾರಿಗಳು ದಂಡೋತಿ ವಸತಿ ಶಾಲೆಗೆ ಭೇಟಿ ನೀಡಿದ ನಂತರ, ಜಿಲ್ಲಾಧಿಕಾರಿ ಇಕ್ರಮುಲ್ಲಾ ಶರೀಫ್ ಅವರಿಗೆ ಭೇಟಿಯಾಗಿ ಮನವಿ ಸಲ್ಲಿಸಿತು.

ಮಳೆ ಕೊರತೆಯಿಂದಾಗಿ ರೈತರು ಸಂಕಷ್ಟದಲ್ಲಿದ್ದು, ಕುಡಿವ ನೀರಿನ ಸಮಸ್ಯೆ ಶುರುವಾಗಿದೆ. ಹೀಗಾಗಿ ಜಿಲ್ಲೆಯನ್ನು ಬರಪೀಡಿತ ಘೋಷಿಸಿ ಅಗತ್ಯ ಪರಿಹಾರ ಕ್ರಮ ಕೈಗೊಳ್ಳಬೇಕು. ಬೆಳೆ ವಿಮೆಯ ಎರಡನೇ ಕಂತಿನ ಪರಿಹಾರ ಕೂಡಲೇ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು. ಗುತ್ತಿಗೆದಾರರ ಲೈಸನ್ಸ್ ರದ್ದುಪಡಿಸಿ: ದಂಡೋತಿ ವಸತಿ ಶಾಲೆಗೆ ಕಳಪೆ ಆಹಾರ ಸಾಮಗ್ರಿ ಒದಗಿಸಿದ ಗುತ್ತಿಗೆದಾರರ ಲೈಸನ್ಸ್ ರದ್ದುಗೊಳಿಸಿ ಕ್ರಿಮಿನಲ್ ಕೇಸ್ ದಾಖಲಿಸಬೇಕು. ಕುಡಿಯುವ ನೀರಿನ ಟ್ಯಾಂಕ್ ಎರಡ್ಮೂರು ವರ್ಷಗಳಿಂದ ಸ್ವಚ್ಛಗೊಳಿಸದ್ದರಿಂದ ಗಲೀಜು ನೀರು ಬಳಸಲಾಗಿದೆ. ಇನ್ಮುಂದೆ ನಿತ್ಯ ಮಕ್ಕಳಿಗೆ ಶುದ್ಧ ಕುಡಿವ ನೀರಿನ ವ್ಯವಸ್ಥೆ ಮಾಡಬೇಕು ಎಂದು ನಿಯೋಗ ಜಿಲ್ಲಾಧಿಕಾರಿಗಳಿಗೆ ಒತ್ತಾಯಿಸಿತು.

ಒಂದೇ ಕೋಣೆಯಲ್ಲಿ 25 ಮಕ್ಕಳು ಮಲಗುತ್ತಾರೆ. ಕಿಟಕಿ, ಫ್ಯಾನ್ ವ್ಯವಸ್ಥೆ ಇಲ್ಲ. ಮೊಟ್ಟೆ ವಿತರಿಸುವುದಿಲ್ಲ. ಮಗುವಿನ ವೆಚ್ಚಕ್ಕೆ ನೀಡುವ ಹಣ ದುರ್ಬಳಕೆ ಆಗಿರುವ ಸಾಧ್ಯತೆ ಇದೆ. ಹೀಗಾಗಿ ಸೂಕ್ತ ತನಿಖೆ ನಡೆಸಬೇಕು ಎಂದು ಆಗ್ರಹಿಸಲಾಗಿದೆ ಎಂದು ಡಾ.ಬಿ.ಜಿ.ಪಾಟೀಲ್ ಮತ್ತು ರಾಜಕುಮಾರ ತೆಲ್ಲೂರ ತಿಳಿಸಿದ್ದಾರೆ.

ಕಲಬುರಗಿ, ಯಾದಗಿರಿ ಜಿಲ್ಲೆಗಳಲ್ಲಿ ಮಳೆ ಕೊರತೆಯಾಗಿದ್ದರಿಂದ ಕೂಡಲೇ ಬರಪೀಡಿತ ಘೋಷಿಸಿ ರೈತರಿಗೆ ಪರಿಹಾರ ವಿತರಿಸಬೇಕು. ದನಗಳಿಗೆ ಮೇವಿನ ವ್ಯವಸ್ಥೆ ಮಾಡಬೇಕು. ಬರ ಪರಿಹಾರ ಕಾರ್ಯ ಆರಂಭಿಸಿ ಜನರ ನೆರವಿಗೆ ಸರ್ಕಾರ ಧಾವಿಸಬೇಕು.
– ಡಾ.ಬಿ.ಜಿ.ಪಾಟೀಲ್
ವಿಧಾನ ಪರಿಷತ್ ಸದಸ್ಯ.

ಸಂಬಂಧಿಸಿದ ಅಧಿಕಾರಿಗಳು ಹಾಗೂ ವಸತಿನಿಲಯಗಳ ವಾರ್ಡನ್, ಮೇಲ್ವಿಚಾರಕರು ಸರಿಯಾಗಿ ಕೆಲಸ ಮಾಡದ್ದರಿಂದಲೇ ಘಟನೆ ನಡೆದಿದೆ. ಅನುದಾನ ದುರುಪಯೋಗ ಮಾಡಿಕೊಂಡು ಬಡ ಮಕ್ಕಳಿಗೆ ಸಮಯಾನುಸಾರ ಉತ್ತಮ ಆಹಾರ ಒದಗಿಸುವಲ್ಲಿ ವಿಫಲವಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

## ಎಸ್‌ಐಆರ್ ಪ್ರಕ್ರಿಯೆಯಲ್ಲಿ ಎಲ್ಲಾ ಮತದಾರರೂ ಭಾಗಿಯಾಗುವಂತೆ ಮಾಜಿ ಮೇಯರ್ ರಾಜೇಶ್ವರಿ ಕರೆ



ಬಳ್ಳಾರಿ, ಜು.20: ಚುನಾವಣಾ ಆಯೋಗದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ (ಎಸ್‌ಐಆರ್) ಎಲ್ಲ ಮತದಾರರು ಸಕ್ರಿಯರಾಗಿ ಪಾಲ್ಗೊಳ್ಳಬೇಕೆಂದು ಮಾಜಿ ಮೇಯರ್, ಪಾಲಿಕೆಯ ಸದಸ್ಯೆ ಎಂ.ರಾಜೇಶ್ವರಿ ಅಭಿಪ್ರಾಯ ಪಟ್ಟಿದ್ದಾರೆ.

ಸೋಮವಾರ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಮಾರ್ಗದರ್ಶನದಲ್ಲಿ ತೆರೆಯಲಾಗಿರುವ ಎಸ್‌ಐಆರ್ ಸಹಾಯ ಕೇಂದ್ರಕ್ಕೆ ಭೇಟಿ ನೀಡಿ ಸ್ವಯಂಸೇವಕರಿಂದ ಮಾಹಿತಿ ಪಡೆದ ನಂತರ ಈ ಕುರಿತು ಅವರು ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡಿದ್ದಾರೆ.

ಮತದಾನದ ಹಕ್ಕು ಸಾಂವಿಧಾನಿಕ ಹಕ್ಕಾಗಿದ್ದು ಎಸ್‌ಐಆರ್ ಸಮೀಕ್ಷೆಯಲ್ಲಿ ನಾಗರಿಕರೆಲ್ಲರೂ ಭಾಗವಹಿಸುವ ಮೂಲಕ ಅಂತಿಮ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಉಳಿಸಿಕೊಳ್ಳಬೇಕು ಎಂದಿದ್ದಾರೆ.

ಚುನಾವಣಾ ಆಯೋಗದ ವತಿಯಿಂದ ಬರುವ ಬೂತ್ ಮಟ್ಟದ ಅಧಿಕಾರಿಗಳಿಗೆ ನಾಗರಿಕರು ಸಹಕರಿಸಬೇಕು, ಎನ್ಯುಮರೇಶನ್ ಫಾರಂಗಳನ್ನು ಪಡೆದು ಸರಿಯಾದ ಮಾಹಿತಿ ತುಂಬಿ ಅಥವಾ ತುಂಬಿಸಿ ಬಿಎಲ್‌ಓ ಅವರಿಗೆ ನೀಡಬೇಕು ಎಂದು ಹೇಳಿರುವ ಅವರು, ಯಾವುದೇ ನಾಗರಿಕರು ಈ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು ಎಂದು ಹೇಳಿದ್ದಾರೆ. ನಗರದ ರಾಘವೇಂದ್ರ ಟಾಕೀಸನ ಕಟ್ಟಡದಲ್ಲಿ ನಗರ ಶಾಸಕರು ಚುನಾವಣಾ ಆಯೋಗದ ನಿಯಮಗಳನ್ನು ಗಮನದಲ್ಲಿಟ್ಟುಕೊಂಡು ಸಹಾಯ ಕೇಂದ್ರ ಆರಂಭಿಸಿದ್ದಾರೆ, ಎನ್ಯುಮರೇಶನ್ ಫಾರಂ ಭರ್ತಿ ಸಂಬಂಧ ಅಗತ್ಯ ಸಹಾಯ ಬೇಕಾದ ನಾಗರಿಕರು ಇಲ್ಲಿಗೆ ಭೇಟಿ ನೀಡಬಹುದು, ಸಹಾಯ ಕೇಂದ್ರ ಅತ್ಯುತ್ತಮವಾಗಿ ಕಾರ್ಯ ನಿರವಹಿಸುತ್ತಿದೆ ಎಂದು ಪ್ರಶಂಸಿಸಿದ್ದಾರೆ.

## ಬೇಡ ಬ್ರೋ – ರೈಸ್ ಅಭಿಯಾನಕ್ಕೆ ಚಾಲನೆ

### ಮಾದಕ ವಸ್ತು ಸೇವನೆ, ಸಾಗಣೆ ಹಾಗೂ ಮಾರಾಟ ತಡೆಯುವ ಅಭಿಯಾನ




ಕಲಬುರಗಿ, ಜು.20: ಕಲಬುರಗಿ ನಗರ ಮತ್ತು ಕಲಬುರಗಿ ಜಿಲ್ಲಾ ಪೊಲೀಸ್ ವತಿಯಿಂದ 'ಬೇಡ ಬ್ರೋ ಮತ್ತು ರೈಸ್' ಅಭಿಯಾನಕ್ಕೆ ಸೋಮವಾರ ಚಾಲನೆ ನೀಡಲಾಯಿತು.

ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ., ಡಿಸಿಪಿಗಳಾದ ಶಾಲೂ, ಪ್ರವೀಣ್ ನಾಯಕ್, ಎಸ್.ಪಿ.ಅಡ್ಡೂರು ಶ್ರೀನಿವಾಸಲು ಅವರು ಪೋಸ್ಟರ್ ಬಿಡುಗಡೆ ಮಾಡುವುದರ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಜೂ.30ರಂದು ರಾಜ್ಯಾದ್ಯಾಂತ ಅಂತರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಾಣೆ ವಿರೋಧಿ ದಿನವನ್ನು ಆಚರಿಸಲಾಗಿದ್ದು ಈ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಮುಖ್ಯ ಮಂತ್ರಿಗಳು ಹಾಗೂ ಮಾನ್ಯ ಗೃಹ ಮಂತ್ರಿಗಳು 'ಆಪರೇಷನ್ ರೈಸ್' ಕ್ಯಾಂಪನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ. ಅದರನ್ವಯ ಮಾದಕ ವಸ್ತುಗಳ ಸೇವನೆ, ಸಾಗಣೆ ಹಾಗೂ ಮಾರಾಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಜಾರಿಗೆ ತಂದಿರುವ 'ಬೇಡ ಬ್ರೋ – ಮತ್ತು ರೈಸ್' ಕಲಬುರಗಿ ನಗರ ಹಾಗೂ ಜಿಲ್ಲೆಯಾದ್ಯಂತ ಜಾರಿಗೊಳಿಸಲಾಗುತ್ತಿದೆ ಎಂದು ಎಸ್.ಪಿ.ಅಡ್ಡೂರು ಶ್ರೀನಿವಾಸಲು, ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ಮಾದಕ ವಸ್ತುಗಳ ಸೇವನೆಯಿಂದ ಮಾನಸಿಕ ಆರೋಗ್ಯ, ಕುಟುಂಬ ಸಂಬಂಧಗಳು, ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ. ವೃತ್ತಿ ಜೀವನ ಹಾಗೂ ಆತ್ಮಹತ್ಯೆಯಂತಹ ಗಂಭೀರ ಸಮಸ್ಯೆಗಳು ಎದುರಾಗುತ್ತಿವೆ. ಡ್ರಗ್ಸ್ ಸೇವನೆಯಿಂದ ಹಲವಾರು ಜನ ಸಾವನಪ್ಪುತ್ತಿರುವ ಘಟನೆಗಳು ಬೆಳಕಿಗೆ ಬರುತ್ತಿವೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ರಾಜ್ಯಾದ್ಯಾಂತ ಜಾರಿಗೆ ತಂದಿರುವ ನೋ ಬ್ರೋ ಮತ್ತು ರೈಸ್ ಅಭಿಯಾನದ ಮೂಲಕ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.


ಅಧ್ಯಕ್ಷರು:
ಭಾರತೀಯ
ರಾಷ್ಟ್ರೀಯ
ಕಾಂಗ್ರೆಸ್
(ಎಐಸಿಸಿ) ಹಾಗೂ
ರಾಜ್ಯಸಭೆಯ
ವಿರೋಧ ಪಕ್ಷದ
ನಾಯಕರಾದ
ಸನ್ಮಾನ್ಯಶ್ರೀ
ಮಲ್ಲಿಕಾರ್ಜುನ ಖರ್ಗೆ
ಅವರಿಗೆ...
ಜನ್ಮದಿನದ ಹಾರ್ದಿಕ
ಶುಭಾಶಯಗಳು
21.07.2026
ಶುಭ ಕೋರುವವರು
ಬಿ.ಶಿವಣ್ಣ Msc, LLB
ಶಾಸಕರು
ಆನೇಕಲ್ ವಿಧಾನಸಭಾ ಕ್ಷೇತ್ರ,
ಬೆಂಗಳೂರು, ಕರ್ನಾಟಕ